# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 53 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಬುಧವಾರ ದಿನಾಂಕ : 02-09-2026 ಪುಟ : 04 ಬೆಲೆ : 2-00


# ನೀಟ್ ಪ್ರತಿಭಟನಕಾರರ ಎಫ್‌ಐಆರ್ ರದ್ದು

ನವದೆಹಲಿ, ಸೆ.1: ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ವಿವಿಧ ರಾಜ್ಯಗಳಲ್ಲಿ ನಡೆದ ಪ್ರತಿಭಟನೆಗಳ ವೇಳೆ ಹಿಂಸಾಚಾರ ನಡೆದಿದೆ ಎಂಬ ಆರೋಪದ ಮೇಲೆ ವಿದ್ಯಾರ್ಥಿಗಳು ಹಾಗೂ ಪ್ರತಿಭಟನಕಾರರ ವಿರುದ್ಧ ದಾಖಲಿಸಲಾಗಿದ್ದ ಎಫ್‌ಐಆರ್‌ಗಳನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದೆ. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳ ಭವಿಷ್ಯ ಹಾಗೂ ಅವರ ಮೇಲಿನ ಪ್ರಕರಣಗಳಿಂದ ಉಂಟಾಗಬಹುದಾದ ಪರಿಣಾಮಗಳನ್ನು ಪರಿಗಣಿಸಿ ನ್ಯಾಯಾಲಯ ಈ ಮಹತ್ವದ ಆದೇಶ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜಾಯ್‌ಮಾಲ್ಯಾ





ಬಾಗ್ಚಿ ಮತ್ತು ವಿ.ಮೋಹನಾ ಅವರನ್ನು ಒಳಗೊಂಡ ನ್ಯಾಯಪೀಠವು ಪ್ರಕರಣದ ವಿಚಾರಣೆ ನಡೆಸಿ ಎಫ್‌ಐಆರ್‌ಗಳನ್ನು ರದ್ದುಪಡಿಸುವ ಆದೇಶ ಹೊರಡಿಸಿತು. ದೆಹಲಿ ಪೊಲೀಸರು ಸೇರಿದಂತೆ ಮಹಾರಾಷ್ಟ್ರ, ಅಸ್ಸಾಂ, ಬಿಹಾರ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳ ವ್ಯಾಪ್ತಿಯಲ್ಲಿ ನಡೆದ ಪ್ರತಿಭಟನೆಗಳಿಗೆ ಸಂಬಂಧಿಸಿದಂತೆ ದಾಖಲಿಸಲಾಗಿದ್ದ ಪ್ರಕರಣಗಳು ವಿಚಾರಣೆಯ ವ್ಯಾಪ್ತಿಗೆ ಬಂದಿದ್ದವು.

ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮಗಳ ಆರೋಪಗಳು ದೇಶಾದ್ಯಂತ ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ತೀವ್ರ ಆತಂಕಕ್ಕೆ ಕಾರಣವಾಗಿದ್ದವು. ಈ ಹಿನ್ನೆಲೆಯಲ್ಲಿ

2ನೇ ಪುಟಕ್ಕೆ..

## ಕಲ್ಲಿಹಾಳ್ ಉಪ ತಹಶೀಲ್ದಾರ್ ಪುಷ್ಪಲತಾಗೆ 4 ವರ್ಷ ಜೈಲು




ಶಿವಮೊಗ್ಗ: ಲಂಚ ಪಡೆಯುವಾಗ ಸಿಕ್ಕಿಬಿದ್ದಿದ್ದ ಕಲ್ಲಿಹಾಳ್ ನಾಡಕಚೇರಿ ಉಪ ತಹಶೀಲ್ದಾರ್ ಪುಷ್ಪಲತಾಗೆ ಶಿವಮೊಗ್ಗ ಜಿಲ್ಲಾ ಮತ್ತು ವಿಶೇಷ ನ್ಯಾಯಾಲಯ 40,000 ರೂ. ದಂಡ ಹಾಗೂ 4 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಹುಟ್ಟು ಮೂಕನಾಗಿರುವ ತಂದೆಗೆ ಅಂಗವಿಕಲರ ಪಿಂಚಣಿ ಕೊಡಿಸಲು ಮುಂದಾಗಿದ್ದ ಡಿ.ಬಿ. ಹಳ್ಳಿಯ ನಿವಾಸಿ ಗಿರೀಶ್ ಅವರ ಬಳಿ ಅಪರಾಧಿ ಪುಷ್ಪಲತಾ 10,000 ರೂ. ಲಂಚಕ್ಕೆ ಬೇಡಿಕೆಯಿಟ್ಟಿದ್ದಳು. ಅದರಂತೆ ಮುಂಗಡವಾಗಿ 2017ರ ಸೆಪ್ಟೆಂಬರ್ 21 ರಂದು 5,000 ರೂ. ಲಂಚ ಪಡೆಯುವಾಗ ಕಚೇರಿಯಲ್ಲಿ ರೆಡ್‌ಹ್ಯಾಂಡ್ ಆಗಿ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿಬಿದ್ದಿದ್ದಳು. ತನಿಖಾಧಿಕಾರಿಯಾಗಿದ್ದ

2ನೇ ಪುಟಕ್ಕೆ..

## ನೆಲ್ಯಾಡಿ, ಶಿರಾಡಿ , ಮರ್ದಾಳ ಗ್ರಾಮ ಪಂಚಾಯಿತಿಗೆ ಲೋಕಾಯುಕ್ತ ದಾಳಿ

ನೆಲ್ಯಾಡಿ: ಲೋಕಾಯುಕ್ತ ಪೊಲೀಸರು ನೆಲ್ಯಾಡಿ, ಶಿರಾಡಿ ಹಾಗೂ ಮರ್ದಾಳ ಗ್ರಾಮ ಪಂಚಾಯಿತಿಗೆ ಲೋಕಾಯುಕ್ತ ಪೊಲೀಸರು ದಾಳಿ ಮಾಡಿದ್ದಾರೆ.

ಲೋಕಾಯುಕ್ತರ ತಂಡ ಗ್ರಾಮ ಪಂಚಾಯಿತಿ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಹಲಾಮೂರ್ತಿ ರಾವ್ ಮತ್ತು ಸಿಬ್ಬಂದಿಗಳಾದ ನಾಗರಾಜ್, ಪ್ರಸನ್ನ, ಸುದೀಪ್, ಜಲಾಲ್ ನೇತೃತ್ವದ ತಂಡ ನೆಲ್ಯಾಡಿ ಗ್ರಾಮ ಪಂಚಾಯಿತಿಯಲ್ಲಿ ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ.

## ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರ ಹೆಚ್ಚಳ

ನವದೆಹಲಿ : ಹೊಸ ತಿಂಗಳ ಆರಂಭದಲ್ಲೇ ತೈಲ ಮಾರುಕಟ್ಟೆ ಕಂಪನಿಗಳು ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರಿಗೆ ಬೆಲೆ ಏರಿಕೆಯ ಬಿಸಿ ಮುಟ್ಟಿಸಿವೆ. 19 ಕೆಜಿ ತೂಕದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರದಲ್ಲಿ ಹೆಚ್ಚಳ ಮಾಡಲಾಗಿದ್ದು, ವಾಣಿಜ್ಯ ಬಳಕೆದಾರರಿಗೆ ಆರ್ಥಿಕ ಹೊರೆ ಹೆಚ್ಚಾಗಿದೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಪ್ರಕಟಿಸಿದ ಮಾಹಿತಿಯ ಪ್ರಕಾರ, ಕಮರ್ಷಿಯಲ್ ಸಿಲಿಂಡರ್ ಒಂದರ ಮೇಲೆ 9.50 ರೂಪಾಯಿವರೆಗೆ ದರ

2ನೇ ಪುಟಕ್ಕೆ..



## 101 ತಾಲೂಕು ಬರ ಘೋಷಣೆ: ಡಿಸಿಎಂ



ಬೆಂಗಳೂರು: ಮೈಸೂರು ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ತಂಬಾಕು ಈ ಬಾರಿ ಬರದ ಕಾರಣದಿಂದ ತೊಂದರೆಯಾಗಿದೆ. ತಂಬಾಕು ಬೆಳೆಗಾರರಿಗೆ ಬೆಳೆ ಪರಿಹಾರ ನೀಡಲು ಸಾಧ್ಯವಿಲ್ಲ. ಈ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಚರ್ಚಿಸಿ ಹೇಗೆ ಸಹಾಯ ಮಾಡಬಹುದು ಎನ್ನುವ ಪರಿಶೀಲನೆ ಮಾಡುತ್ತೇವೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ತಿಳಿಸಿದರು.

ಮೈಸೂರು ಜಿಲ್ಲೆ ಹುಣಸೂರು ತಾಲೂಕಿನ ಕಟ್ಟೆಮಳಲವಾಡಿ ಗ್ರಾಮದಲ್ಲಿ ಬರ ವೀಕ್ಷಣೆ ನಡೆಸಿದ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು. ಹುಣಸೂರು ಹಾಗೂ ಪಿರಿಯಾಪಟ್ಟಣ ತಾಲೂಕಿನಲ್ಲಿ ತಂಬಾಕು ಬೆಳೆಯುತ್ತಾರೆ. ಆದರೆ ಈ ಬಾರಿ ಹುಣಸೂರು ತಾಲ್ಲೂಕಿನಲ್ಲೇ 16 ಸಾವಿರಕ್ಕೂ ಹೆಚ್ಚು ಹೆಕ್ಟರ್ ಪ್ರದೇಶದಲ್ಲಿ ನಷ್ಟ ಉಂಟಾಗಿದೆ. ಆದರೆ ಕೇಂದ್ರ ಸರ್ಕಾರದ ಮಾನದಂಡಗಳ ಪ್ರಕಾರ, ವಾಣಿಜ್ಯ

2ನೇ ಪುಟಕ್ಕೆ...

## ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಕಿತ್ತೊಗೆಯುವ ಶಕ್ತಿ ಬಿಜೆಪಿ ಪಾದಯಾತ್ರೆಗಿದೆ: ವಿಜಯೇಂದ್ರ

ರಾಯಚೂರು: ಕರ್ನಾಟಕದ ರಾಜಕೀಯ ದಿಕ್ಕನ್ನೇ ಬದಲಿಸುವ ಶಕ್ತಿ ಬಿಜೆಪಿಯ ಐತಿಹಾಸಿಕ ಪಾದಯಾತ್ರೆಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಲಿಂಗಸೂರಿನಿಂದ ಆರಂಭಗೊಂಡಿರುವ ಬಿಜೆಪಿ ಪಾದಯಾತ್ರೆ ಕೇವಲ ರಾಜಕೀಯ ಕಾರ್ಯಕ್ರಮವಲ್ಲ. ಇದು ದಲಿತ ವಿರೋಧಿ, ರೈತ ವಿರೋಧಿ, ಬಡವರ ವಿರೋಧಿ, ಯುವಜನ ವಿರೋಧಿ, ಮಹಿಳಾ ವಿರೋಧಿ ಹಾಗೂ ಭ್ರಷ್ಟಾಚಾರದಲ್ಲಿ ಮುಳುಗಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧದ ಜನಾಂದೋಲನ ಎಂದು ಅವರು ಹೇಳಿದರು. ಬಿಜೆಪಿ ಯಾ-ಕೆ ಪಾದಯಾತ್ರೆ ಮಾಡುತ್ತಿದೆ ಎಂದು ಡಿಕೆಶಿ ಕೇಳುತ್ತಾರೆ. ನಿಮ್ಮ ಸರ್ಕಾರದ ವೈಫಲ್ಯಗಳೇ ನಮ್ಮ ಪಾದಯಾತ್ರೆಗೆ ಕಾರಣ. ಡಿಕೆಶಿ ಅವರೇ, ಬಿಜೆಪಿ ಯಾಕೆ ಪಾದಯಾತ್ರೆ ಮಾಡುತ್ತಿದೆ ಎಂಬುದನ್ನು ಮೊದಲು ನಿಮ್ಮ ಸರ್ಕಾರದ



ಕನ್ನಡಿಯಲ್ಲಿ ನೋಡಿ ಎಂದರು.

ನಿಮ್ಮ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ಮೂಡಿರುವ ಆಕ್ರೋಶವೇ ಬಿಜೆಪಿ ಪಾದಯಾತ್ರೆಗೆ ಕಾರಣ. ರಾಜ್ಯದ ಜನರ ಹಕ್ಕು, ನ್ಯಾಯ ಮತ್ತು ಭವಿಷ್ಯಕ್ಕಾಗಿ ನಾವು

2ನೇ ಪುಟಕ್ಕೆ..

## ಪೊಲೀಸರ ವಿರುದ್ಧ ಎಂಪಿಆರ್ ಆರೋಪ



ದಾವಣಗೆರೆ: ಗುಟ್ಕಾ ನಿಷೇಧ ಹಾಗೂ ಭದ್ರ ಮೇಲ್ದಂಡೆ ನೀರು ಬಿಡುಗಡೆ ಆದೇಶ ವಿರೋಧಿಸಿ ದಾವಣಗೆರೆಯಲ್ಲಿ ಬಿಜೆಪಿ ರೈತ ಮೋರ್ಚಾದಿಂದ ತೀವ್ರ ಪ್ರತಿಭಟನೆ ನಡೆಯುತ್ತಿದೆ. ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ನೇತೃತ್ವದಲ್ಲಿ ಪ್ರತಿಭಟನೆ ನಡೆಯುತ್ತಿದ್ದು, ಈ ವೇಳೆ ಪೊಲೀಸರು ಹಲ್ಲೆ ನಡೆಸಿದ್ದಾರೆ ಎಂದು ಎಂ.ಪಿ ರೇಣುಕಾಚಾರ್ಯ ಆರೋಪಿಸಿದ್ದಾರೆ.

ಅರುಣ ಸರ್ಕಲ್, ವಿದ್ಯಾರ್ಥಿ ಭವನ್, ರೇಣುಕಾ ಮಂದಿರ ಸೇರಿದಂತೆ ಹಲವು ಕಡೆ ಟಯರ್‌ಗೆ ಬೆಂಕಿ ಹಚ್ಚಿ ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದ್ದಾರೆ. ಬಹುತೇಕ ಅಂಗಡಿ ಮುಂಗಟ್ಟುಗಳನ್ನು ಮುಚ್ಚಲಾಗಿದ್ದು, ವಿವಿಧ ಸಂಘಟನೆಗಳಿಂದ ಸಹ ಬಂದ್‌ಗೆ ಬೆಂಬಲ ಸಿಕ್ಕಿದೆ. ಬೈಕ್ ರ್‍ಯಾಲಿ

2ನೇ ಪುಟಕ್ಕೆ...

## ಲಾಕಪ್ ಡೆತ್: ಸಂತ್ರಸ್ತ ಕುಟುಂಬ ಭೇಟಿ, ಕೆಲಸದ ಭರವಸೆ ನೀಡಿದ ಸಚಿವ ಬಸವಂತಪ್ಪ

ಹೊಸಪೇಟೆ: ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ತಿಂಗಳ ಹಿಂದೆ ನಡೆದ ಲಾಕಪ್ ಡೆತ್ ಪ್ರಕರಣ-ಕ್ಕೆ ಸಂಬಂಧಿಸಿದಂತೆ ಮೃತ ಖಲೀಲ್ ಅವರ ಪತ್ನಿಗೆ ಯಾವುದಾದರೂ ಕೆಲಸ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಬಸವಂತಪ್ಪ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಅವರಿಗೆ ಸೂಚಿಸಿದರು.

ಸಂತ್ರಸ್ತ ಕುಟುಂಬದ ಸದಸ್ಯರ ಜತೆಗೆ ಮಂಗಳವಾರ ಇಲ್ಲಿ ಸಚಿವರನ್ನು ಭೇಟಿ ಮಾಡಿದ ಎಸ್‌ಡಿಪಿಐ ನಿಯೋಗದ ಮನವಿಗೆ ಸ್ಪಂದಿಸಿದ ಸಚಿವರು ಈ ಸೂಚನೆ ನೀಡಿದರು ಹಾಗೂ ಮಕ್ಕಳನ್ನು ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ದಾಖಲಿಸುವಂತೆ ನಿರ್ದೇಶನ ನೀಡಿದರು.

50 ಲಕ್ಷ ಪರಿಹಾರಕ್ಕೆ ಆಗ್ರಹ: ಖಲೀಲ್



ಕುಟುಂಬಕ್ಕೆ 50 ಲಕ್ಷ ಪರಿಹಾರ ನೀಡಬೇಕು, ಮೃತರ ಪತ್ನಿ ಶೈನಾಜ್ ರಅರಿಗೆ ಕಾಯಂ ಸರ್ಕಾರಿ ಉದ್ಯೋಗ ನೀಡಬೇಕು, ಕೇವಲ ಒಂದಿಬ್ಬರು ಪೊಲೀಸರಲ್ಲ, ಹಿರಿಯ ಅಧಿಕಾರಿಗಳ ವಿರುದ್ಧವೂ ಕಾನೂನು ಕ್ರಮ ಜರುಗಿಸಬೇಕು, ಕುಟುಂಬಕ್ಕೆ ರಕ್ಷಣೆ ನೀಡಬೇಕು, ತನಿಖೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಿ, ತಪ್ಪಿತಸ್ಥರ ವಿರುದ್ಧ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಎಸ್‌ಡಿಪಿಐ ಒತ್ತಾಯಿಸಿದೆ.

## ಖರ್ಗೆ ಭಾಷಣ ಸ್ಥಳ ಶುದ್ಧೀಕರಣಕ್ಕೆ ಕಾಂಗ್ರೆಸ್ ಖಂಡನೆ




ವಿಜಯನಗರ : ಕೆಪಿಸಿಸಿ ಆದೇಶದಂತೆ ವಿಜಯನಗರ ಜಿಲ್ಲೆಯ ಹೊಸಪೇಟೆ ನಗರದಲ್ಲಿ ವಿಜಯನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಜಿಲ್ಲಾಧ್ಯಕ್ಷ ಸಿರಾಜ್ ಶೇಖ್ ನಿರ್ದೇಶನದ ಮೇರೆಗೆ ಹೊಸಪೇಟೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ

ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಉತ್ತರಾಖಂಡ್ ರಾಜ್ಯದ ಹಲದ್ವಾನಿ ಭಾಷಣ ಮಾಡಿದ ನಂತರ ಬಿಜೆಪಿ ಆರ್ ಎಸ್ ಎಸ್ ಕಾರ್ಯಕರ್ತರು ನಡೆಸಿದ ಕೀಳು ಮಟ್ಟದ ಸ್ಥಳದ ಶುದ್ಧೀಕರಣ ಆಚರಣೆ ವಿಷಯವಾಗಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಮತ್ತು FIR ದಾಖಲಿಸಬೇಕೆಂದು ಒತ್ತಾಯಿಸಿ ಹೋರಾಟ ಮಾಡಿದ್ದರು. ಉತ್ತರಾಖಂಡ್ ಹಲದ್ವಾನಿ ನಗರದ ಕೊತ್ವಾಲಿ ಪೋಲೀಸ್ ಠಾಣೆಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧವೇ ಈಖಖ ದಾಖಲಿಸಿದ್ದನ್ನು ಖಂಡಿಸಿ

5ನೇ ಪುಟಕ್ಕೆ...

## ಬಿಜೆಪಿ ಪಾದಯಾತ್ರೆ ಕಹಳೆ-ಬಳ್ಳಾರಿ ಚಲೋಗೆ ಬಿಎಸ್‌ವೈ ಚಾಲನೆ!



ರಾಯಚೂರು: ರಾಜ್ಯ ಸರ್ಕಾರದ ವೈಫಲ್ಯಗಳನ್ನ ಖಂಡಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಹಮ್ಮಿಕೊಂಡಿರುವ 'ಬಳ್ಳಾರಿ ಚಲೋ' ಪಾದಯಾತ್ರೆಗೆ ಅಧಿಕೃತ ಚಾಲನೆ ದೊ-ರೆತಿದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಬಿಜೆಪಿ ನಾಯಕರು ಕಹಳೆ ಮೊಳಗಿಸುವ ಮೂಲಕ ಪಾದಯಾತ್ರೆಗೆ ಚಾಲನೆ ನೀಡಿದರು.

ಕಹಳೆ ಊದುವ ಮೂಲಕ ವಿಜಯೇಂದ್ರ, ಆರ್.ಅಶೋಕ್, ಶ್ರೀರಾಮುಲು ಹಾಗೂ ಛಲವಾದಿ ನಾರಾಯಣಸ್ವಾಮಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರೆ, ರೈತಗೀತೆಯೊಂದಿಗೆ ಪಾದಯಾತ್ರೆಯ ವೇದಿಕೆ ಕಾರ್ಯಕ್ರಮ ಆರಂಭವಾಯಿತು.

ಸುಮಾರು 175 ಕಿ.ಮೀ. ಪಾದಯಾತ್ರೆ ಇದಾಗಿದ್ದು, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ತನ್ನ ಆಕ್ರೋಶವನ್ನ ಹೊರಹಾಕಲು ಮುಂದಾಗಿದೆ. ಕಾರ್ಯಕ್ರಮ ವೇದಿಕೆಯಲ್ಲಿ ಸಂಸದರಾದ ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ, ಶ್ರೀರಾಮುಲು, ಜನಾರ್ದನ ರೆಡ್ಡಿ, ಛಲವಾದಿ

2ನೇ ಪುಟಕ್ಕೆ...

ಒಂದನೇ ಪುಟದಿಂದ..

# ನೀಟ್ ಪ್ರತಿಭಟನಕಾರರ ಎಫ್ಐಆರ್ ರದ್ದು

ವಿದ್ಯಾರ್ಥಿ ಸಂಘಟನೆಗಳು ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಪ್ರತಿಭಟನೆಗಳು ನಡೆದಿದ್ದವು. ಕೆಲವು ಪ್ರತಿಭಟನೆಗಳ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗಿದೆ ಹಾಗೂ ಹಿಂಸಾಚಾರ ನಡೆದಿದೆ ಎಂಬ ಆರೋಪದಡಿ ಪ್ರತಿಭಟನಕಾರರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದರು.

ಈ ಪ್ರಕರಣಗಳನ್ನು ರದ್ದುಪಡಿಸುವಂತೆ ಕೇಂದ್ರ ಸರ್ಕಾರದ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಸುಪ್ರೀಂ ಕೋರ್ಟ್‌ನಲ್ಲಿ ಮನವಿ ಮಾಡಿದ್ದರು. ಸಂವಿಧಾನದ 142ನೇ ವಿಧಿಯಡಿ ಸುಪ್ರೀಂ ಕೋರ್ಟ್‌ಗೆ ಇರುವ ವಿಶೇಷ ಅಧಿಕಾರವನ್ನು ಬಳಸಿಕೊಂಡು ಪ್ರಕರಣಗಳಿಗೆ ಅಂತ್ಯ ಹಾಡುವಂತೆ ಅವರು ನ್ಯಾಯಪೀಠವನ್ನು ಕೋರಿದ್ದರು. ಪ್ರಕರಣಗಳನ್ನು ಮುಂದುವರಿಸುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ವೃತ್ತಿಜೀವನದ ಮೇಲೆ ಅನಗತ್ಯ ಪರಿಣಾಮ ಬೀರಬಹುದು ಎಂಬ ಅಂಶವೂ ವಿಚಾರಣೆಯಲ್ಲಿ ಪ್ರಮುಖವಾಗಿತ್ತು.

ಜುಲೈನಲ್ಲಿ ನೀಟ್ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ದೆಹಲಿ ಸೇರಿದಂತೆ ಹಲವು ರಾಜ್ಯಗಳಲ್ಲಿ ಪ್ರತಿಭಟನೆಗಳು ನಡೆದಿದ್ದವು. ಈ ಸಂದರ್ಭದಲ್ಲಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಮತ್ತು ಇತರರ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿದ್ದವು. ಪ್ರತಿಭಟನೆ ನಡೆಸುವುದು ಪ್ರಜಾಸತ್ತಾತ್ಮಕ ಹಕ್ಕಾಗಿದ್ದರೂ, ಸಾರ್ವಜನಿಕ ಆಸ್ತಿ ಹಾನಿ ಅಥವಾ ಹಿಂಸಾಚಾರಕ್ಕೆ ಸಂಬಂಧಿಸಿದ ಆರೋಪಗಳ ಹಿನ್ನೆಲೆಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗಿತ್ತು.

ಇದಕ್ಕೂ ಮುನ್ನ, ಜುಲೈ 25ರಂದು ಕೇಂದ್ರ ಸರ್ಕಾರದ ವತಿಯಿಂದ ಕೆಲವು ಭರವಸೆಗಳನ್ನು ನೀಡಲಾಗಿತ್ತು. ಪರೀಕ್ಷಾ ಅಕ್ರಮಗಳ ಕುರಿತು ಕ್ರಮ ಕೈಗೊಳ್ಳುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಲಾಗಿತ್ತು. ಆದರೆ ಆ ಭರವಸೆಗಳನ್ನು ಈಡೇರಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ದೆಹಲಿಯಲ್ಲಿ ಸೆಪ್ಟೆಂಬರ್ 5ರಂದು ಪ್ರತಿಭಟನಾ ರ್‍ಯಾಲಿಗೆ ಕರೆ ನೀಡಿತ್ತು. ಈ ಬೆಳವಣಿಗೆಯ ಬೆನ್ನಲ್ಲೇ ಸುಪ್ರೀಂ ಕೋರ್ಟ್‌ನಿಂದ ಎಫ್ಐಆರ್ ರದ್ದತಿ ಆದೇಶ ಹೊರಬಂದಿರುವುದು ಗಮನಾರ್ಹವಾಗಿದೆ. ನ್ಯಾಯಾಲಯದ ಆದೇಶದಿಂದ ಪ್ರಕರಣ ಎದುರಿಸುತ್ತಿದ್ದ ವಿದ್ಯಾರ್ಥಿಗಳು ಹಾಗೂ ಪ್ರತಿಭಟನಕಾರರಿಗೆ ದೊಡ್ಡ ಮಟ್ಟದ ಕಾನೂನು ಪರಿಹಾರ ದೊರೆತಂತಾಗಿದೆ.

ನೀಟ್ ಪರೀಕ್ಷೆಯ ಪಾರದರ್ಶಕತೆ, ಪ್ರಶ್ನೆಪತ್ರಿಕೆ ಸೋರಿಕೆ ತಡೆ, ಪರೀಕ್ಷಾ ಅಕ್ರಮಗಳ ವಿರುದ್ಧ ಕಠಿಣ ಕ್ರಮ ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಯ ರಕ್ಷಣೆಯ ವಿಚಾರಗಳು ದೇಶದಾದ್ಯಂತ ಚರ್ಚೆಗೆ ಗ್ರಾಸವಾಗಿರುವ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್‌ನ ಈ ತೀರ್ಪು ಮಹತ್ವ ಪಡೆದುಕೊಂಡಿದೆ. ವಿದ್ಯಾರ್ಥಿಗಳ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನು ರದ್ದುಪಡಿಸುವ ಮೂಲಕ ಪ್ರತಿಭಟನೆಗೆ ಸಂಬಂಧಿಸಿದ ಕಾನೂನು ವಿವಾದಕ್ಕೆ ನ್ಯಾಯಾಲಯ ಮಹತ್ವದ ಅಂತ್ಯ ನೀಡಿದೆ.

# 101 ತಾಲೂಕು ಬರ ಘೋಷಣೆ: ಡಿಸಿಎಂ ಅಭಯ

ಬೆಳೆಗಳಿಗೆ ಪರಿಹಾರ ಇಲ್ಲ. ಹೀಗಾಗಿ ಇದಕ್ಕೆ ರಾಜ್ಯ ಸರ್ಕಾರದ ಪರಿಹಾರವಿದೆಯೇ ಎಂಬ ಬಗ್ಗೆ ಮುಖ್ಯಮಂತ್ರಿಯೊಂದಿಗೆ ಸಂಪುಟದಲ್ಲಿ ಚರ್ಚೆ ಮಾಡಿ ರೈತರಿಗೆ ಏನು ಸಹಾಯ ಮಾಡಬೇಕು ಎಂಬುದನ್ನು ತೀರ್ಮಾನ ಮಾಡುತ್ತೇವೆ. ಒಂದು ತಾಲ್ಲೂಕಿನಲ್ಲಿ 16 ಸಾವಿರ ಹೆಕ್ಟೇರ್ ನಷ್ಟ ಆಗಿದೆ ಎಂದರೆ, ಪಕ್ಕದ 6 ತಾಲ್ಲೂಕುಗಳಲ್ಲಿಯೂ ಇದುವೇ ಪರಿಸ್ಥಿತಿ ಇದೆ. ಹೀಗಾಗಿ ಈ ಕುರಿತು ಚರ್ಚೆ ಮಾಡುತ್ತೇವೆ ಎಂದರು.

ರಾಜ್ಯದ ಕಾನೂನಿನಡಿಯಲ್ಲಿ ಬರ ಪ್ರದೇಶ ಎಂದು ಘೋಷಣೆ ಮಾಡಿದರೆ ಪರಿಹಾರ ಸಿಗುವುದಿಲ್ಲ. ಕೇಂದ್ರ ಸರ್ಕಾರದ ನಿಯಮಗಳಡಿಯಲ್ಲೇ ಮಾಡಬೇಕು. ಹಾಗಾಗಿ 101 ತಾಲೂಕುಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಿಸಿದ್ದೇವೆ. ಇನ್ನೊಂದು ವಾರ ಬಿಟ್ಟು ಪರಿಶೀಲನೆ ನಡೆಸಿ, ಆಗ ಈ ವರ್ಗಕ್ಕೆ ಸೇರುವ ಪ್ರದೇಶಗಳನ್ನು ಬರಪೀಡಿತ ಎಂದು ಘೋಷಿಸಲಾಗುವುದು ಎಂದು ಪರಮೇಶ್ವರ ಅವರು ತಿಳಿಸಿದರು.

ಇನ್ನೆರಡು ವಾರದೊಳಗೆ ಕೇಂದ್ರಕ್ಕೆ ಸಮಗ್ರ ಬರ ವರದಿಯನ್ನು ಸಲ್ಲಿಸುತ್ತೇವೆ. ಆ ಬಳಿಕ ಕೇಂದ್ರದ ತಂಡಗಳು ಬಂದು ಪರಿಶೀಲನೆ ನಡೆಸಿ, ನಂತರವಷ್ಟೇ ಪರಿಹಾರ ಬಿಡುಗಡೆಯಾಗುತ್ತದೆ. ಅದರ ಮೊದಲು ನಮಗೆ ಯಾವುದೇ ಪರಿಹಾರ ಹಣವನ್ನು ನಮಗೆ ಕೊಡುವುದಿಲ್ಲ ಎಂದರು. ಮುಖ್ಯಮಂತ್ರಿ ಆದೇಶದಂತೆ ಎಲ್ಲ ಸಚಿವರು ತಮಗೆ ನಿಯೋಜಿಸಿರುವ ಜಿಲ್ಲೆಗಳ ಬರ ವೀಕ್ಷಣೆ ನಡೆಸುತ್ತಿದ್ದಾರೆ. ಆನಂತರ ಎಲ್ಲವನ್ನೂ ಒಟ್ಟಾಗಿ ಪರಿಶೀಲಿಸಿ, ರೈತರಿಗೆ ಯಾವ ರೀತಿಯಲ್ಲಿ ಸಹಾಯ ಮಾಡಬೇಕು. ವಿಮೆ ಮೂಲಕ ಏನು ಮಾಡಬೇಕು ಎಂದು ತೀರ್ಮಾನ ಮಾಡುತ್ತೇವೆ ಎಂದು ಹೇಳಿದರು.

ಜೋಳಕ್ಕೆ ಬಿಳಿಸುಳಿ ರೋಗ ಬಂದಿದೆ. ಆ ರೋಗ ಇನ್ಶೂರೆನ್ಸ್‌ನಲ್ಲಿ ಕವರ್ ಆಗಲ್ಲ. ಹಾಗಾಗಿ ವಿಮಾ ಕಂಪನಿಯವರೊಂದಿಗೆ ಮಾತನಾಡಿ ಈ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಪ್ರಯತ್ನ ಮಾಡಬೇಕು. ಇದನೆಲ್ಲ ತಿಳಿದುಕೊಳ್ಳಲೆಂದೇ ಇಂದು ನಾನು ಬರವೀಕ್ಷಣೆಗೆ ಬಂದಿರುವುದಾಗಿ ಪರಮೇಶ್ವರ ತಿಳಿಸಿದರು.

ಅಂತಾರಾಷ್ಟ್ರೀಯ ಹವಾಮಾನ ವರದಿಯ ಪ್ರಕಾರ, ಸೆಪ್ಟೆಂಬರ್ ನಲ್ಲಿ ಒಂದನೇ ವಾರ ಅಥವಾ ಎರಡನೇ ವಾರದಲ್ಲಿ ಮಳೆ ಕಂಪ್ಲೀಟ್ ಆಗಿ ನಿಂತು ಹೋಗುತ್ತದೆ ಎಂಬ ಮಾಹಿತಿ ಇದೆ. ಎಲ್ ನಿನೋದಿಂದಾಗಿ 123 ವರ್ಷಗಳ ಬಳಿಕ ಈ ಪರಿಸ್ಥಿತಿ ಇದೆ. ಮಳೆ ಬರುತ್ತದೆ ಎಂದು ಹೇಳಲು ಆಗುವುದಿಲ್ಲ. ಹೀಗಾಗಿ ರೈತರಿಗೆ ಮುಂದೆ ಯಾವ ರೀತಿ ಸಹಾಯ ಮಾಡಬೇಕು ಎಂಬುದನ್ನು ತೀರ್ಮಾನ ಮಾಡುತ್ತೇವೆ ಎಂದರು.

ಮೋಡ ಬಿತ್ತನೆಯ ಪ್ರಶ್ನೆಗೆ ಉತ್ತರಿಸಿದ ಅವರು, ಮೋಡ ಬಿತ್ತನೆ ಮಾಡಲು ಆದೇಶ ಕೊಟ್ಟಿದ್ದಾರೆ. ಈ ಬಗ್ಗೆ ನಮ್ಮ ಟೆಕ್ನಿಕಲ್ ತಂಡದವರು ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಅದರಲ್ಲಿ ಎಷ್ಟರ ಮಟ್ಟಿಗೆ ಸಹಾಯ ಆಗುತ್ತದೆ ಎಂಬುದನ್ನು ನೋಡಬೇಕು. ತಾಂತ್ರಿಕ ವರದಿಯ ಪ್ರಕಾರ ಹೆಚ್ಚು ಮಳೆ ಬರುವುದಿಲ್ಲ. ಅದು ತುಂತುರು ಮಳೆ ಬಂದ ಹಾಗೆ ಬರುತ್ತದೆ. ಜೊತೆಗೆ ಅದು ಬೆಳೆಗಳಿಗೆ ಸಾಕಾಗುತ್ತದೆ ಎಂದು ಹೇಳಿದ್ದಾರೆ. ಹೀಗಾಗಿ ಇದನ್ನು ನಾವೆಲ್ಲರೂ ಒಪ್ಪಿಕೊಂಡಿದ್ದೇವೆ ಎಂದು ಉಪಮುಖ್ಯಮಂತ್ರಿ ತಿಳಿಸಿದರು.

# ಸರ್ಕಾರ ಕಿತ್ತೊಗೆಯುವ ಶಕ್ತಿ ಬಿಜೆಪಿಗಿದೆ

ಬೀದಿಗಿಳಿದಿದ್ದೇವೆ. ಭ್ರಷ್ಟಾಚಾರವನ್ನು ರಕ್ಷಿಸುವ ಸರ್ಕಾರವನ್ನು ಕಿತ್ತೊಗೆಯುವವರೆಗೂ ಬಿಜೆಪಿ ಹೋರಾಟ ನಿಲ್ಲಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ದುರುಪಯೋಗದ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ ಸಚಿವರಾಗಿದ್ದ ನಾಗೇಂದ್ರ ಅವರ ರಾಜೀನಾಮೆ ಪಡೆಯಬೇಕಾಯಿತು. ಬಿಜೆಪಿ ಹೋರಾಟ ತೀವ್ರಗೊಳಿಸಿದ ಬಳಿಕ ಸರ್ಕಾರ ಆತುರಾತುರವಾಗಿ ರಾಜೀನಾಮೆ ಪಡೆಯುವ ಪರಿಸ್ಥಿತಿ ನಿರ್ಮಾಣವಾಯಿತು.

ವಿಪಕ್ಷ ನಾಯಕ ಆರ್. ಅಶೋಕ್ ಅವರು ಅಹೋರಾತ್ರಿ ಹೋರಾಟ ಘೋಷಿಸಿದ ತಕ್ಷಣವೇ ಸದನದ ಕಲಾಪವನ್ನು ಮೊಟಕುಗೊಳಿಸಿ ಸರ್ಕಾರ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಪ್ರಯತ್ನ ಮಾಡಿತು. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬಿಜೆಪಿ ನಡೆಸಿದ ಅಹೋರಾತ್ರಿ ಹೋರಾಟದ ಪರಿಣಾಮವಾಗಿ ಮೊದಲ ಹಂತದ ಜಯ ದೊರೆತಿದೆ ಎಂದರು.

ದಲಿತರ ಪರ ಎಂದು ಹೇಳಿಕೊಳ್ಳುವ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಸುಮಾರು 187 ಕೋಟಿ ರೂ. ಹಣದ ದುರುಪಯೋಗದ ಆರೋಪ ಕೇಳಿಬಂದಿದೆ. ದಲಿತ ಸಮುದಾಯದ ಅಭಿವೃದ್ಧಿಗೆ ಮೀಸಲಾದ ಹಣವೇ ದುರುಪಯೋಗವಾಗಿರುವಾಗ ಸರ್ಕಾರದ ದಲಿತಪರ ಕಾಳಜಿ ಎಲ್ಲಿದೆ ಎಂದು ಪ್ರಶ್ನಿಸಿದರು. ಯೋಜನೆಗಳಡಿ ದಲಿತರಿಗೆ ಮೀಸಲಿಟ್ಟ ಹಣವನ್ನು ಬೇರೆಡೆಗೆ ವರ್ಗಾಯಿಸಲಾಗಿದೆ ಎಂಬ ಆರೋಪಗಳಿಗೂ ಸರ್ಕಾರ ಉತ್ತರ ನೀಡಬೇಕು. ಡಿಕೆ ಶಿವಕುಮಾರ್ ಅವರೇ, ದಲಿತರ ಹಣದ ವಿಚಾರದಲ್ಲಿ ರಾಜ್ಯದ ಜನತೆಗೆ ಸ್ಪಷ್ಟ ಉತ್ತರ ನೀಡಿ ಎಂದು ಆಗ್ರಹಿಸಿದರು.

ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಮತದಾನ ಅಕ್ರಮಗಳ ಕುರಿತು ಮಾತನಾಡಿದ್ದಕ್ಕಾಗಿ ರಾಜೀನಾಮೆ ಪಡೆಯಲಾಗಿದೆ. ಆಗ ನಿಮ್ಮ ದಲಿತಪರ ಕಾಳಜಿ ಎಲ್ಲಿತ್ತು? ಎಂದು ವಿಜಯೇಂದ್ರ ಪ್ರಶ್ನಿಸಿದರು.

ದಲಿತರ ಪರ ಭಾಷಣ ಮಾಡುವುದರಿಂದ ಮಾತ್ರ ಸಾಮಾಜಿಕ ನ್ಯಾಯ ಸಾಧ್ಯವಿಲ್ಲ. ದಲಿತರ ಹಣ, ಹಕ್ಕು ಮತ್ತು ಬದುಕನ್ನು ರಕ್ಷಿಸುವ ಜವಾಬ್ದಾರಿಯನ್ನು ಸರ್ಕಾರ ನಿಭಾಯಿಸಬೇಕು ಎಂದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಆಡಳಿತದಲ್ಲಿ ವಾಲ್ಮೀಕಿ ಹಾಗೂ ಬೋವಿ ಅಭಿವೃದ್ಧಿ ನಿಗಮಗಳಂತಹ ಸಂಸ್ಥೆಗಳನ್ನು ಸ್ಥಾಪಿಸಿ ಹಿಂದುಳಿದ ಸಮುದಾಯಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿತ್ತು. ಆದರೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ವಿವಿಧ ಅಭಿವೃದ್ಧಿ ನಿಗಮಗಳ ಹಣ ದುರುಪಯೋಗವಾಗುತ್ತಿರುವ ಆರೋಪಗಳು ಕೇಳಿಬರುತ್ತಿವೆ. ಇದರಿಂದ ಬಡವರು ಮತ್ತು ಶೋಷಿತ ಸಮುದಾಯಗಳಿಗೆ ತಲುಪಬೇಕಾದ ಯೋಜನೆಗಳು ಸ್ಥಗಿತಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ

# ಬರ ಪೀಡಿತ ತಾಲ್ಲೂಕುಗಳ 2ನೇ ಪಟ್ಟಿ ಪ್ರಕಟ: ಡಿಕೆಶಿ




ಗದಗ : "ನಾವು ಮಾರ್ಗಸೂಚಿ ಅನುಸಾರ ಬರ ಪ್ರದೇಶ ಘೋಷಣೆ ಮಾಡಬೇಕು. ಅದರನ್ವಯ ಅಧ್ಯಯನ ಮಾಡಿ ಎರಡನೇ ಪಟ್ಟಿಯನ್ನು ಶೀಘ್ರವೇ ಘೋಷಣೆ ಮಾಡುತ್ತೇವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಬರ ಪರಿಸ್ಥಿತಿ ಕುರಿತು ಸಿಎಂ ಡಿ ಕೆ ಶಿವಕುಮಾರ್ ಅವರು ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಬಳಿಕ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

"ಜಿಲ್ಲಾ ಸಚಿವರು ಪ್ರತಿ ತಾಲ್ಲೂಕಿಗೆ ಭೇಟಿ ನೀಡಿ, ವಾಸ್ತವಾಂಶದ ವರದಿ ನೀಡಿದ್ದಾರೆ. ಅದರ ಜೊತೆಗೆ ಅಧಿಕಾರಿಗಳು ಅಧ್ಯಯನ ಮಾಡುತ್ತಿದ್ದಾರೆ. ಎರಡೂ ವರದಿ ಪರಿಶೀಲಿಸಿ ಕೇಂದ್ರಕ್ಕೆ ವರದಿ ಸಲ್ಲಿಸಬೇಕಿದೆ" ಎಂದು ವಿವರಿಸಿದರು.

"ರೈತರ ಬದುಕು ಅಪಾಯದಲ್ಲಿದೆ. ಜಿಲ್ಲೆಯ ಜನ ಆತಂಕಕ್ಕೆ ಒಳಗಾಗಿದ್ದಾರೆ. 50 ವರ್ಷಗಳಲ್ಲಿ ಭೀಕರ ಬರ ಪರಿಸ್ಥಿತಿಗೆ ಜಿಲ್ಲೆ ಒಳಗಾಗಿದೆ. ಈ ವರ್ಷ ಶೇ. 40 ರಷ್ಟು ಮಳೆ ಕಡಿಮೆಯಾಗಿದೆ. ನಾನು

ಹೆಲಿಕಾಪ್ಟರ್ ನಲ್ಲಿ ಬರುವಾಗ ನೋಡಿದೆ. ಹಲವು ಕಡೆ ಬಿತ್ತನೆಯೇ ಆಗಿಲ್ಲ. ಬಿತ್ತನೆ ಆಗಿರುವ ಕಡೆಗಳಲ್ಲಿ 10–15% ಬೆಳೆ ಕೂಡ ರೈತರ ಕೈ ಸೇರುವುದಿಲ್ಲ" ಎಂದರು. "ರೈತರ ಜಮೀನಿಗೆ ಹೋಗಿ ಹತ್ತಿ, ಕಡಲೆಕಾಯಿ, ಜೋಳ, ಸೂರ್ಯಕಾಂತಿ ಬೆಳೆ ವೀಕ್ಷಣೆ ಮಾಡಿದ್ದೇನೆ. ರೈತರಿಗೆ ಯಾವ ಪ್ರಮಾಣದಲ್ಲಿ ತೊಂದರೆ ಆಗುತ್ತಿದೆ ಎಂದು ಮನವರಿಕೆ ಆಗಿದೆ. ರೈತರೊಂದಿಗೆ ಚರ್ಚೆ ಮಾಡಿದ್ದು, ಅವರ ನೋವು ತಿಳಿಸಿದ್ದಾರೆ. ಜನ ವಲಸೆ ಹೋಗುವುದನ್ನು ತಪ್ಪಿಸಲು ವಿಬಿಜಿ ರಾಮ್ ಜಿ ಯೋಜನೆ ಹೇಗೆ ಸಹಾಯ ಆಗಬೇಕು ಎಂದು ತಿಳಿಸಿದ್ದಾರೆ" ಎಂದರು. "ಈ ಜಿಲ್ಲೆಯಲ್ಲಿ ಗಜೇಂದ್ರಗಡ ಮಾತ್ರ ಬರ ಪೀಡಿತ ಎಂದು ಘೋಷಣೆ ಮಾಡಲಾಗಿದ್ದು, ಜಿಲ್ಲಾ ಮಂತ್ರಿಗಳ ನೇತೃತ್ವದಲ್ಲಿ ಎಲ್ಲಾ ಶಾಸಕರು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡಬೇಕು ಎಂದು ಮನವಿ ಸಲ್ಲಿಸಿದ್ದಾರೆ" ಎಂದು ಹೇಳಿದರು. "ಹೆಚ್ ಕೆ ಪಾಟೀಲ ಅವರು ಮೋಡ ಬಿತ್ತನೆ ವಿಚಾರವಾಗಿ ತಮ್ಮ ಅಭಿಪ್ರಾಯ ಮಂಡಿಸಿದ್ದಾರೆ. ಅದೇ ರೀತಿ ಬೇರೆ ಶಾಸಕರು ಬೇರೆ ಬೇರೆ ವಿಚಾರವಾಗಿ ಗಮನ ಸೆಳೆದಿದ್ದಾರೆ. ನೀರಾವರಿ, ಬೆಣ್ಣೆ ಹಳ್ಳ ಸೇರಿದಂತೆ ಬೇರೆ ಅಭಿವೃದ್ಧಿ ಯೋಜನೆಗಳ ಬಗ್ಗೆ ಚರ್ಚಿಸಿದ್ದಾರೆ. ಆರ್ಥಿಕ ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ಈ ಯೋಜನೆಗಳ ಬಗ್ಗೆ ಕ್ರಮ ಕೈಗೊಳ್ಳುತ್ತೇವೆ" ಎಂದು ತಿಳಿಸಿದರು. "ನಮ್ಮ ವರದಿ ಕೇಂದ್ರದ ವರದಿ ಜತೆ ಹೊಂದಾಣಿಕೆ ಆಗಬೇಕು. ದೆಹಲಿಯಿಂದ ಬರುವ ಬರ ಅಧ್ಯಯನ ತಂಡಕ್ಕೆ ನಮ್ಮ ವರದಿ ಒಪ್ಪಿಗೆ ಆಗಬೇಕು. ಆಗ ಮಾತ್ರ ಕೇಂದ್ರ ಸರ್ಕಾರ ನೆರವು ನೀಡಲಿದೆ. ನಾವು ನಮ್ಮ ಕೈಲಾದ ಕ್ರಮ ಕೈಗೊಂಡಿದ್ದೇವೆ ಎಂದರು.

ಒಂದನೇ ಪುಟದಿಂದ..

# ಬಿಜೆಪಿ ಪಾದಯಾತ್ರೆ ಕಹಳೆ–ಬಳ್ಳಾರಿ ಚಲೋಗೆ ಬಿಎಸ್‌ವೈ ಚಾಲನೆ!

ನಾರಾಯಣಸ್ವಾಮಿ, ಜಗದೀಶ್ ಶೆಟ್ಟರ್, ಸಿ.ಟಿ ರವಿ ಸೇರಿದಂತೆ ಹಲವು ಬಿಜೆಪಿ ನಾಯಕರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಪಾದಯಾತ್ರೆ ಸಮಾವೇಶಕ್ಕೆ ಚಾಲನೆ ನೀಡುವುದಕ್ಕೂ ಮುನ್ನ ಬಿ.ವೈ ವಿಜಯೇಂದ್ರ ಅವರು ಗುರಗುಂಟಾ ಅಮರೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ, ಪಾದಯಾತ್ರೆ ಯಶಸ್ವಿಯಾಗಲಿ ಎಂದು ಪ್ರಾರ್ಥಿಸಿದರು. ಈ ವೇಳೆ ಶಾಸಕ ಮಾನಪ್ಪ ವಜ್ಜಲ್, ಪರಿಷತ್ ಸದಸ್ಯ ರವಿಕುಮಾರ್, ಪ್ರತಾಪಗೌಡ ಪಾಟೀಲ್, ಬಂಗಾರು ಹನುಮಂತು ಹಾಗೂ ಬಸವರಾಜ ದಡೆಸಗೂರು ಸಾಥ್ ನೀಡಿದರು. ಬಳಿಕ ಗಜಯೋಗಿ ಶಿವಾಚಾರ್ಯ ಶ್ರೀಗಳ ಆಶೀರ್ವಾದವನ್ನೂ ವಿಜಯೇಂದ್ರ ಪಡೆದರು.

ಇದಕ್ಕೂ ಮುನ್ನ ಶಾಸಕ ಮಾನಪ್ಪ ವಜ್ಜಲ್ ಅವರ ನಿವಾಸಕ್ಕೆ ಮಾಜಿ ಸಿಎಂ ಯಡಿಯೂರಪ್ಪ, ಜಗದೀಶ್ ಶೆಟ್ಟರ್, ಗೋವಿಂದ ಕಾರಜೋಳ ಹಾಗೂ ಶಾಸಕ ಜನಾರ್ದನ ರೆಡ್ಡಿ ಸೇರಿದಂತೆ ಬಿಜೆಪಿ ನಾಯಕರು ಭೇಟಿ ನೀಡಿದ್ದರು.

ಬಳ್ಳಾರಿ ಚಲೋ ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಬಿ.ಎಸ್ ಯಡಿಯೂರಪ್ಪ ಅವರು, ಜನಾಕ್ರೋಶಕ್ಕೆ ಮಣಿದು ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಸ್ಥಗಿತಗೊಂಡಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿದೆ. ಹತ್ತು ಹಲವು ಹಗರಣಗಳಲ್ಲಿ ಸರ್ಕಾರ ಮುಳುಗಿದೆ. ಇಂತಹ ಸರ್ಕಾರದ ವಿರುದ್ಧ ವಿಜಯೇಂದ್ರ ಸೇರಿದಂತೆ ಬಿಜೆಪಿ ನಾಯಕರು ಹೋರಾಟಕ್ಕೆ ಇಳಿದಿದ್ದಾರೆ. ಈ ಸರ್ಕಾರ ತೊಲಗುವವರೆಗೂ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ಗುಡುಗಿದರು.

ಇದೇ ವೇಳೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಅಮೆರಿಕಾದಿಂದ ಮರಳಿದ ಬಳಿಕ ದೇಶದಲ್ಲೇ ಸಂಚಲನ ಮೂಡಿಸುವ ವಿಚಾರ ಬಹಿರಂಗಪಡಿಸುವುದಾಗಿ ನೀಡಿರುವ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಯಡಿಯೂರಪ್ಪ, ಕುಮಾರಸ್ವಾಮಿ ಅವರು ಸುಮ್ಮನೆ ಹೇಳುವುದಿಲ್ಲ.

ಅವರು ಹೇಳಿದ್ದಾರೆ ಎಂದರೆ ಸರ್ಕಾರದಲ್ಲೇ ಸಂಚಲನ ಮೂಡಿಸುವ ವಿಷಯ ಇರಬಹುದು. ಅವರ ಹೋರಾಟಕ್ಕೆ ನಾವು ಬೆಂಬಲ ನೀಡುತ್ತೇವೆ ಎಂದು ತಿಳಿಸಿದರು.

# ಪೊಲೀಸರ ವಿರುದ್ಧ ಎಂಪಿಆರ್ ಆರೋಪ

ಮೂಲಕ ನಗರದಾದ್ಯಂತ ಸಂಚಾರ ಬಂದ್‌ಗೆ ಬಿಜೆಪಿ ಕಾರ್ಯಕರ್ತರು ಹಾಗೂ ಅಡಿಕೆ ಬೆಳೆಗಾರರರು ಮನವಿ ಮಾಡುತ್ತಿದ್ದಾರೆ.

ಬಸ್ ಹಾಗೂ ವಾಹನಗಳನ್ನು ತಡೆದು ಬಂದ್‌ಗೆ ಬೆಂಬಲಿಸುವಂತೆ ಪ್ರತಿಭಟನಾಕಾರರು ಒತ್ತಾಯಿಸಿದ್ದಾರೆ. ಯಾವುದೇ ಕಾರಣಕ್ಕೂ ಬಲವಂತದ ಬಂದ್ ಮಾಡುವಂತಿಲ್ಲ ಎಂದು ಪೊಲೀಸರು ಈ ವೇಳೆ ಎಚ್ಚರಿಕೆ ನೀಡಿದ್ದಾರೆ. ಇದರಿಂದ ಪೊಲೀಸರು ಹಾಗೂ ಬಿಜೆಪಿ ನಾಯಕರ ನಡುವೆ ವಾಗ್ವಾದ ನಡೆದಿದೆ.

ಪ್ರತಿಭಟನೆ ತೀವ್ರತೆ ಹೆಚ್ಚಾಗುತ್ತಿದ್ದಂತೆ ಎಂ.ಪಿ ರೇಣುಕಾಚಾರ್ಯ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಈ ವೇಳೆ ಪೊಲೀಸರು ಹಾಗೂ ರೇಣುಕಾಚಾರ್ಯ ನಡುವೆ ವಾಗ್ವಾದ ನಡೆದಿದೆ. ಕೈ, ಮೈ ಭಾಗಕ್ಕೆ ಪೊಲೀಸರು ಹಲ್ಲೆ ಮಾಡಿದ್ದಾರೆ. ರಾಜ್ಯ ಸರ್ಕಾರದಿಂದ ಬಂದ್ ಹತ್ತಿಕ್ಕುವ ಪ್ರಯತ್ನ ನಡೆದಿದೆ. ನಮ್ಮ ಕಾರ್ಯಕರ್ತರಿಗೂ ಪೊಲೀಸರು ಹಲ್ಲೆ ನಡೆಸಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ದಾವಣಗೆರೆ ಬಂದ್ ಯಶಸ್ವಿಯಾಗಿದೆ. ಆದರೆ ನಮ್ಮ ಹೋರಾಟ ಹತ್ತಿಕ್ಕುವ ಪ್ರಯತ್ನ ಮಾಡಲಾಗಿದೆ. ಗುಟ್ಕಾ ನಿಷೇಧ ಹಿಂಪಡೆಯಬೇಕು, ಅಪ್ಪರ್ ಭದ್ರಾಕ್ಕೆ ನೀರು ಬಿಡುವ ಆದೇಶ ಹಿಂಪಡೆಯಬೇಕು. ಇಲ್ಲದಿದ್ದರೆ ವಿಧಾನಸೌಧ ಚಲೋ ಮಾಡುತ್ತೇವೆ ಎಂದು ಅವರು ಎಚ್ಚರಿಸಿದ್ದಾರೆ.

# ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರ ಹೆಚ್ಚಳ

ಪರಿಷ್ಕರಿಸಿ ಏರಿಕೆ ಮಾಡಲಾಗಿದೆ. ಆದಾಗ್ಯೂ, ಗೃಹ ಬಳಕೆದಾರರಿಗೆ ತೈಲ ಕಂಪನಿಗಳು ಕೊಂಚ ರಿಲೀಫ್ ನೀಡಿವೆ. 14 ಕೆಜಿ ತೂಕದ ಸಾಮಾನ್ಯ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. ಹಾಗೆಯೇ 5 ಕೆಜಿ ಮತ್ತು 10 ಕೆಜಿ ಸಿಲಿಂಡರ್ ಬೆಲೆಗಳೂ ಕೂಡ ಯಥಾಸ್ಥಿತಿಯಲ್ಲಿ ಮುಂದುವರಿದಿವೆ.

ಕಳೆದ ತಿಂಗಳುಗಳಲ್ಲೂ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ತೈಲ ಮತ್ತು ಅನಿಲ ಬೆಲೆಗಳಲ್ಲಿ ಉಂಟಾದ ವ್ಯತ್ಯಾಸ ಹಾಗೂ ಸಾಗಾಣಿಕೆ ವೆಚ್ಚದ ಆಧಾರದ ಮೇಲೆ ತೈಲ ಕಂಪನಿಗಳು ನಿಯಮಿತವಾಗಿ ಸಿಲಿಂಡರ್ ಬೆಲೆಗಳನ್ನು ಪರಿಷ್ಕರಿಸುತ್ತ ಬಂದಿವೆ. ಈ ಬಾರಿಯೂ ವಾಣಿಜ್ಯ ಬಳಕೆಯ ಸಿಲಿಂಡರ್ ದರ ಮಾತ್ರ ಹೆಚ್ಚಾಗಿದ್ದು, ಗೃಹ ಬಳಕೆದಾರರಿಗೆ ಯಾವುದೇ ಬೆಲೆ ಏರಿಕೆಯ ಬಿಸಿ ತಟ್ಟಿಲ್ಲದಿರುವುದು ಸಮಾಧಾನಕರ ಸಂಗತಿಯಾಗಿದೆ.

19 ಕೆಜಿ ವಾಣಿಜ್ಯ ಸಿಲಿಂಡರ್‌ಗಳ ಜತೆಗೆ 5 ಕೆಜಿ ನಾನ್–ಡೊಮೆಸ್ಟಿಕ್ ಐಕಲು ರಿಫಿಲ್ ದರವೂ 2 ರೂ.ಗಳಷ್ಟು ಹೆಚ್ಚಾಗಿದೆ. ದೆಹಲಿ ಸೇರಿದಂತೆ ಹಲವು ಕಡೆ ಇದರ ದರ 762 ರೂ.ಗಳಿಂದ 764ರೂ.ವರೆಗೆ ಏರಿಕೆಯಾಗಿದೆ. ಆದರೆ ಗೃಹ ಬಳಕೆಯ 5 ಕೆಜಿ ಸಿಲಿಂಡರ್ ಹಾಗೂ XTRALITE ಸೇರಿದಂತೆ ಕೆಲವು ಇತರೆ ವರ್ಗಗಳ ದರದಲ್ಲಿ ಬದಲಾವಣೆ ಇಲ್ಲ.

ಈ ದರ ಪರಿಷ್ಕರಣೆಯನ್ನು ಪ್ರತ್ಯೆ ಕವಾಗಿ ನೋಡಿದರೆ ಪರಿಣಾಮ ಸಣ್ಣದಾಗಿ ಕಾಣಬಹುದು. ಆದರೆ ಕಳೆದ ಕೆಲವು ತಿಂಗಳ ಬೆಲೆ ಚಲನವಲನ ಗಮನಿಸಿದರೆ ವಾಣಿಜ್ಯ ಔಪ ದರದಲ್ಲಿ ಸಾಕಷ್ಟು ಏರಿಳಿತ ಕಂಡುಬಂದಿದೆ.

ಜುಲೈ 1, 2026ರಂದು 19 ಕೆಜಿ ವಾಣಿಜ್ಯ ಸಿಲಿಂಡರ್ ದರವನ್ನು ದೆಹಲಿಯಲ್ಲಿ 183.50 ರೂ.ಗಳಷ್ಟು ಕಡಿತಗೊಳಿಸಲಾಗಿತ್ತು. ಆಗ ದೆಹಲಿಯ ದರ 3,113.50 ರೂ.ಗಳಿಂದ 2,930ರೂ.ಗಳವರೆಗೆ ಇಳಿದಿತ್ತು. ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾಗಿದ್ದ ಇಂಧನ ಪೂರೈಕೆ ಒತ್ತಡ ಕಡಿಮೆಯಾಗಿದ್ದ ಹಿನ್ನೆಲೆಯಲ್ಲಿ ಈ ಕಡಿತಕ್ಕೆ ದಾರಿ ಮಾಡಿಕೊಟ್ಟಿತ್ತು.

# ರಷ್ಯಾ ಸೇನೆಯಲ್ಲಿರುವ 227 ಭಾರತೀಯರಲ್ಲಿ 51 ಮಂದಿ ನಿಧನ

ಬಿಷ್ಕೆಕ್, ಸೆ.1– ಬರೊಬ್ಬರಿ 227 ಭಾರತೀಯ ಪ್ರಜೆಗಳನ್ನು ರಷ್ಯಾದ ಸಶಸ್ತ್ರ ಪಡೆಗಳಿಗೆ ಸೇರಿಸಿಕೊಳ್ಳಲಾಗಿದ್ದು, ಅವರಲ್ಲಿ 139 ಜನರನ್ನು ಬಿಡುಗಡೆ ಮಾಡಲಾಗಿದೆ ಮತ್ತು 51 ಮಂದಿ ನಿಧನರಾಗಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಹೇಳಿದ್ದಾರೆ, ಉಳಿದವರ ಬಿಡುಗಡೆ ಮತ್ತು ವಾಪಸಾತಿಗಾಗಿ ನವದೆಹಲಿ ಮಾಸ್ಕೊದೊಂದಿಗೆ ನಿರಂತರ ಚರ್ಚೆಯಲ್ಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಕಿರ್ಗಿಸ್ತಾನ್ ಭೇಟಿಯ ಕುರಿತು ವಿದೇಶಾಂಗ ಸಚಿವಾಲಯದ ವಿಶೇಷ ಮಾಹಿತಿಯ ಸಂದರ್ಭದಲ್ಲಿ ರಷ್ಯಾದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಭಾರತೀಯರ ಕುರಿತು ಪ್ರಶ್ನೆಗೆ ಉತ್ತರಿಸುತ್ತಾ ಅವರು ಈ ಹೇಳಿಕೆ ನೀಡಿದ್ದಾರೆ. ಭಾರತ ಮತ್ತು ರಷ್ಯಾ ನಡುವೆ ವಿವಿಧ ಹಂತಗಳಲ್ಲಿ ಮತ್ತು ಹಲವಾರು ಸಂದರ್ಭಗಳಲ್ಲಿ ಈ ವಿಷಯವನ್ನು ಚರ್ಚಿಸಲಾಗಿದೆ ಎಂದು ಮಿಶ್ರಿ ಹೇಳಿದರು. ರಷ್ಯಾದ ಸೇನೆಯಿಂದ ಭಾರತೀಯರನ್ನು ಬಿಡುಗಡೆ ಮಾಡುವ ಬಗ್ಗೆ, ನಮ್ಮ ಪ್ರಜೆಗಳು, ನಮ್ಮ ನಾಗರಿಕರು, ರಷ್ಯಾದ ಸಶಸ್ತ್ರ ಪಡೆಗಳಿಗೆ ನೇಮಕಗೊಳ್ಳುವ ವಿಷಯದ ಬಗ್ಗೆ ಭಾರತ ಮತ್ತು ರಷ್ಯಾ ನಡುವೆ ವಿವಿಧ ಸಂದರ್ಭಗಳಲ್ಲಿ ವಿವಿಧ ಹಂತಗಳಲ್ಲಿ ಚರ್ಚಿಸಲಾಗಿದೆ ಎಂದು ಮಿಶ್ರಿ ಹೇಳಿದರು.

ರಷ್ಯಾದ ಸೇನೆಗೆ ನೇಮಕಗೊಂಡ ಭಾರತೀಯರ ಸಂಖ್ಯೆಯ ಕುರಿತು ನವೀಕರಣವನ್ನು ಒದಗಿಸುತ್ತಾ, ಮಿಶ್ರಿ ಹೇಳಿದರು, ಕೊನೆಯ ಎಣಿಕೆಯ ಪ್ರಕಾರ, ರಷ್ಯಾದ ಸೇನೆಗೆ ನೇಮಕಗೊಂಡ 227 ಭಾರತೀಯ ಪ್ರಜೆಗಳ ಬಗ್ಗೆ ನಮಗೆ ಮಾಹಿತಿ ಇತ್ತು.ಅದರಲ್ಲಿ, ನಮ್ಮ ಪ್ರಜೆಗಳಲ್ಲಿ 139 ಜನರನ್ನು ಸೇನೆಯಿಂದ ಬಿಡುಗಡೆ ಮಾಡಲಾಗಿದೆ ಎಂಬ ಮಾಹಿತಿ ನಮಗಿದೆ. ದುರದೃಷ್ಟವಶಾತ್, ಇಲ್ಲಿಯವರೆಗೆ ಸಾವನ್ನಪ್ಪಿದ 51 ಜನರ ಬಗ್ಗೆಯೂ ನಮಗೆ ಮಾಹಿತಿ ಇದೆ ಎಂದು ಅವರು ಹೇಳಿದರು.

ಈ ವಿಷಯದಲ್ಲಿ ಭಾರತವು ರಷ್ಯಾದ ಕಡೆಯೊಂದಿಗೆ ಸಂಪರ್ಕದಲ್ಲಿದೆ ಮತ್ತು ಉಳಿದ ಭಾರತೀಯ ಪ್ರಜೆಗಳನ್ನು ಶೀಘ್ರವಾಗಿ ಬಿಡುಗಡೆ ಮಾಡಿ ಹಿಂದಿರುಗಿಸಲು ಪ್ರಯತ್ನಿಸುತ್ತಿದೆ ಎಂದು ಮಿಶ್ರಿ ಪುನರುಚ್ಚರಿಸಿದರು.

ಮಾಸ್ಕೊದಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಭಾರತೀಯ ಪ್ರಜೆಗಳ ಬಿಡುಗಡೆ ಮತ್ತು ವಾಪಸಾತಿಗೆ ಸಂಬಂಧಿಸಿದ ಪರಿಸ್ಥಿತಿಯನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ಅವರು ಹೇಳಿದರು.

# ಉಪ ತಹಶೀಲ್ದಾರ್ ಪುಷ್ಪಲತಾಗೆ 4 ವರ್ಷ ಜೈಲು

ಪೊಲೀಸ್ ಇನ್ಸ್‌ಪೆಕ್ಟರ್ ಹೆಚ್.ಎಸ್.ತಿಪ್ಪೇಸ್ವಾಮಿ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿದ ಶಿವಮೊಗ್ಗದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ಹಾಗೂ ವಿಶೇಷ ನ್ಯಾಯಾಲಯವು ಅಪರಾಧಿಗೆ 4 ವರ್ಷ ಜೈಲು ಶಿಕ್ಷೆ ಹಾಗೂ ದಂಡವನ್ನ ವಿಧಿಸಿ ತೀರ್ಪು ಪ್ರಕಟಿಸಿದೆ.

ಸರ್ಕಾರದ ಪರವಾಗಿ ವಿಶೇಷ ಸಾರ್ವಜನಿಕ ಅಭಿಯೋಜಕರಾದ ಸುಂದರ್ ರಾಜ್ ಅವರು ವಾದ ಮಂಡಿಸಿದ್ದರು.

# ಅ.11ರಿಂದ 21ರವರೆಗೆ ಮೈಸೂರು ದಸರಾ: ಭರದ ಸಿದ್ಧತೆ



ಮೈಸೂರು: ವಿಶ್ವವಿಖ್ಯಾತ ಮೈಸೂರು ದಸರಾ ಉತ್ಸವಕ್ಕೆ ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, 2026ರ ದಸರಾ ಮಹೋತ್ಸವವು ಅಕ್ಟೋಬರ್ 11ರಿಂದ 21ರವರೆಗೆ ವಿವಿಧ ಸಾಂಸ್ಕೃತಿಕ ಹಾಗೂ ಸಾಂಪ್ರದಾಯಿಕ ಕಾರ್ಯಕ್ರಮಗಳೊಂದಿಗೆ ಅದ್ದೂರಿಯಾಗಿ ನಡೆಯಲಿದೆ. ಉತ್ಸವದ ಹಿನ್ನೆಲೆಯಲ್ಲಿ ಮೈಸೂರು ನಗರವನ್ನು ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸಲು ಹಾಗೂ ಭವ್ಯ ಡ್ರೋನ್ ಪ್ರದರ್ಶನ ಆಯೋಜಿಸಲು ಒಟ್ಟು 13.77 ಕೋಟಿ ಅನುದಾನ ಮೀಸಲಿಡಲಾಗಿದೆ.

ದಸರಾ ಉತ್ಸವದ ಪ್ರಮುಖ ಆಕರ್ಷಣೆಯಾಗಿರುವ ಜಂಬೂ ಸವಾರಿಗೆ ಸಿದ್ಧತೆಗಳು ಈಗಾಗಲೇ ಆರಂಭವಾಗಿವೆ. ಮೈಸೂರು ಅರಮನೆಯಲ್ಲಿ ವಾಸ್ತವ್ಯ ಹೂಡಿರುವ ದಸರಾ ಆನೆಗಳ ಪೈಕಿ ಒಂಬತ್ತು ಆನೆಗಳು ಸಾಂಪ್ರದಾಯಿಕ ಜಂಬೂ ಸವಾರಿ ಸಾಗುವ ಮಾರ್ಗದಲ್ಲಿ ಮೊದಲ ಹಂತದ ಪರಿಚಯಾತ್ಮಕ ಪೂರ್ವಾಭ್ಯಾಸದ ನಡಿಗೆ ಪೂರ್ಣಗೊಳಿಸಿವೆ. ಆನೆಗಳ ನಡಿಗೆ ಹಾಗೂ ಅವುಗಳ ತರಬೇತಿ ವೀಕ್ಷಿಸಲು ಮಾರ್ಗದುದ್ದಕ್ಕೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರು.

ದಸರಾ ಮಹೋತ್ಸವದಲ್ಲಿ ಆನೆಗಳ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಜಂಬೂ ಸವಾರಿಯ ಸಂದರ್ಭದಲ್ಲಿ ಯಾವುದೇ ಅಡಚಣೆ ಉಂಟಾಗದಂತೆ ಆನೆಗಳಿಗೆ ಹಂತ ಹಂತವಾಗಿ ತರಬೇತಿ ನೀಡಲಾಗುತ್ತಿದೆ. ಅರಮನೆ ಆವರಣದಿಂದ ಸಾಂಪ್ರದಾಯಿಕ ಜಂಬೂ ಸವಾರಿ ಮಾರ್ಗದವರೆಗೆ ಆನೆಗಳನ್ನು ಕರೆತಂದು ನಗರದ ವಾತಾವರಣ, ಜನಸಂದಣಿ, ವಾಹನ ಸಂಚಾರ ಹಾಗೂ ಶಬ್ದಗಳಿಗೆ ಅವು ಹೊಂದಿಕೊಳ್ಳುವಂತೆ ಪೂರ್ವಾಭ್ಯಾಸ ನಡೆಸಲಾಗುತ್ತಿದೆ.

ಮೊದಲ ಹಂತದ ಮಾರ್ಗ ಪೂರ್ವಾಭ್ಯಾಸ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ತರಬೇತಿ ಹಾಗೂ ಪೂರ್ವಾಭ್ಯಾಸಗಳನ್ನು ನಡೆಸುವ ಮೂಲಕ ಆನೆಗಳನ್ನು ದಸರಾ ಮೆರವಣಿಗೆಗೆ ಸಜ್ಜುಗೊಳಿಸಲಾಗುತ್ತದೆ.

ದಸರಾ ಹಿನ್ನೆಲೆಯಲ್ಲಿ ಮೈಸೂರು ನಗರದ ಪ್ರಮುಖ ರಸ್ತೆಗಳು, ವೃತ್ತಗಳು ಹಾಗೂ ಪ್ರವಾಸಿ ತಾಣಗಳಲ್ಲಿ ವ್ಯಾಪಕ ವಿದ್ಯುತ್ ದೀಪಾಲಂಕಾರ ಕೈಗೊಳ್ಳಲು ಯೋಜಿಸಲಾಗಿದೆ. ಪ್ರವಾಸಿಗರು ಹಾಗೂ ಸಾರ್ವಜನಿಕರನ್ನು ಆಕರ್ಷಿಸುವ ರೀತಿಯಲ್ಲಿ ನಗರದ ಸೌಂದರ್ಯ ಹೆಚ್ಚಿಸುವ ಉದ್ದೇಶದಿಂದ ವಿಶೇಷ ಬೆಳಕಿನ ವ್ಯವಸ್ಥೆ ರೂಪಿಸಲಾಗುತ್ತಿದೆ.

ಇದರ ಜೊತೆಗೆ ಭವ್ಯ ಡ್ರೋನ್ ಪ್ರದರ್ಶನಕ್ಕೂ ಸಿದ್ಧತೆ ನಡೆಯುತ್ತಿದ್ದು, ದಸರಾ ಉತ್ಸವದ ಪ್ರಮುಖ ದಿನಗಳಲ್ಲಿ ಆಕಾಶದಲ್ಲಿ ನಡೆಯಲಿರುವ ದೃಶ್ಯ ವೈಭವ ಪ್ರವಾಸಿಗರ ಗಮನ ಸೆಳೆಯುವ ನಿರೀಕ್ಷೆಯಿದೆ.

### ದಸರಾಗೆ ಕಂಬಳದ ಮೆರುಗು

ಈ ಬಾರಿಯ ಮೈಸೂರು ದಸರಾ ಉತ್ಸವಕ್ಕೆ ಹೊಸ ಆಕರ್ಷಣೆಯಾಗಿ ಸಾಂಪ್ರದಾಯಿಕ ಕಂಬಳ ಉತ್ಸವವನ್ನು ಸೇರ್ಪಡೆಗೊಳಿಸಲಾಗುತ್ತಿದೆ. ಎಮ್ಮೆ ಓಟಕ್ಕೆ ಅಗತ್ಯವಿರುವ ವಿಶೇಷ ಕಂಬಳ ಟ್ರ್ಯಾಕ್ ನಿರ್ಮಾಣ ಕಾರ್ಯ ನಡೆಯುತ್ತಿದೆ. ಸೆಪ್ಟೆಂಬರ್ 15ರಿಂದ ಕಂಬಳದ ಅಧಿಕೃತ ಪೂರ್ವಾಭ್ಯಾಸ ಆರಂಭವಾಗಲಿದ್ದು, 120ಕ್ಕೂ ಹೆಚ್ಚು ಜೋಡಿ ಎಮ್ಮೆಗಳು ಭಾಗವಹಿಸುವ ನಿರೀಕ್ಷೆಯಿದೆ.

ಕಂಬಳ ಸ್ಪರ್ಧೆಯನ್ನು ದಸರಾ ಉತ್ಸವದ ಭಾಗವಾಗಿ ಆಯೋಜಿಸುತ್ತಿರುವುದು ಈ ಬಾರಿಯ ಮಹೋತ್ಸವದ ಪ್ರಮುಖ ವಿಶೇಷತೆಗಳಲ್ಲಿ ಒಂದಾಗಿದೆ. ರಾಜ್ಯದ ವಿವಿಧ ಭಾಗಗಳಿಂದ ಕಂಬಳ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ಎಮ್ಮೆ ಜೋಡಿಗಳು ಆಗಮಿಸುವ ನಿರೀಕ್ಷೆಯಿದ್ದು, ಇದರಿಂದ ದಸರಾ ಉತ್ಸವಕ್ಕೆ ಮತ್ತಷ್ಟು ವೈಭವ ಬರಲಿದೆ.

### ಪ್ರವಾಸಿಗರ ನಿರೀಕ್ಷೆ

ದಸರಾ ಮಹೋತ್ಸವದ ದಿನಾಂಕಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಮೈಸೂರು ನಗರದಲ್ಲಿ ಸಿದ್ಧತೆಗಳು ವೇಗ ಪಡೆದುಕೊಂಡಿವೆ. ಅರಮನೆ ಆವರಣ, ಪ್ರಮುಖ ರಸ್ತೆ, ಜಂಬೂ ಸವಾರಿ ಮಾರ್ಗ ಸೇರಿದಂತೆ ವಿವಿಧೆಡೆ ಅಗತ್ಯ ವ್ಯವಸ್ಥೆಗಳನ್ನು ಕೈಗೊಳ್ಳಲಾಗುತ್ತಿದೆ. ದೇಶ–ವಿದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವ ನಿರೀಕ್ಷೆಯಿದ್ದು, ಪ್ರವಾಸಿಗರಿಗೆ ಉತ್ತಮ ಅನುಭವ ಕಲ್ಪಿಸಲು ಜಿಲ್ಲಾಡಳಿತ ಹಾಗೂ ಸಂಬಂಧಿತ ಇಲಾಖೆಗಳು ಸಿದ್ಧತೆ ನಡೆಸುತ್ತಿವೆ.

ದೀಪಾಲಂಕಾರ ಮತ್ತು ಡ್ರೋನ್ ಪ್ರದರ್ಶನ ಸೇರಿದಂತೆ ವಿವಿಧ ಸಿದ್ಧತೆಗಳಿಗೆ ಒಟ್ಟು 13.77 ಕೋಟಿ ಮೀಸಲಿಡಲಾಗಿದೆ.

ಅಕ್ಟೋಬರ್ 11ರಿಂದ 21ರವರೆಗೆ ನಡೆಯಲಿರುವ 2026ರ ಮೈಸೂರು ದಸರಾ ಉತ್ಸವದಲ್ಲಿ ಸಾಂಪ್ರದಾಯಿಕ ಕಾರ್ಯಕ್ರಮಗಳ ಜೊತೆಗೆ ಕಂಬಳ, ದೀಪಾಲಂಕಾರ ಮತ್ತು ಡ್ರೋನ್ ಪ್ರದರ್ಶನಗಳು ವಿಶೇಷ ಆಕರ್ಷಣೆಯಾಗಲಿವೆ.

# ಬರಪೀಡಿತ ಪ್ರದೇಶಗಳಿಗೆ ಸಚಿವ ಪರಮೇಶ್ವರ್ ದಿಢೀರ್ ಭೇಟಿ

ಮೈಸೂರು: ಜಿಲ್ಲಾ ಪ್ರವಾಸದಲ್ಲಿರುವ ಸಚಿವ ಡಾ. ಜಿ. ಪರಮೇಶ್ವರ್ ಅವರು ಕೆ.ಆರ್.ನಗರ ತಾಲೂಕಿನ ವಿವಿಧ ಬರಪೀಡಿತ ಪ್ರದೇಶಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಳೆ ಕೊರತೆಯಿಂದ ಒಣಗುತ್ತಿರುವ ರಾಗಿ ಹಾಗೂ ಹೊಗೆಸೊಪ್ಪು ಬೆಳೆಗಳನ್ನು ವೀಕ್ಷಿಸಿದ ಸಚಿವರು, ರೈತರೊಂದಿಗೆ ಸಮಾಲೋಚನೆ ನಡೆಸಿ ಬೆಳೆ ಪರಿಸ್ಥಿತಿ ಹಾಗೂ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು. ರೈತರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಅಧಿಕಾರಿಗಳಿಂದಲೂ ಮಾಹಿತಿ ಪಡೆದುಕೊಂಡರು.

ಪ್ರವಾಸದ ಸಂದರ್ಭದಲ್ಲಿ ಕೆ.ಆರ್.ನಗರದಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಭವನ ಕಾಮಗಾರಿಯನ್ನು ಸಚಿವರು ವೀಕ್ಷಿಸಿ, ಕಾಮಗಾರಿಯ ಪ್ರಗತಿ ಕುರಿತು ಪರಿಶೀಲಿಸಿದರು.

ಇದೇ ವೇಳೆ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಅವರ ಸಮಸ್ಯೆಗಳನ್ನು ಆಲಿಸಿದರು. ಸಚಿವರ ಭೇಟಿಯ ವೇಳೆ ಕೆ.ಆರ್.ನಗರ ಶಾಸಕ ರವಿಶಂಕರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ, ಜಿಲ್ಲಾ ಪಂಚಾಯಿತಿ ಸಿಇಒ, ಕೆ.ಆರ್.ನಗರ ತಹಶೀಲ್ದಾರ್ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.





# ಅಧ್ಯಯನ–ಅನುಭವದಿಂದ ಉತ್ತಮ ಸಾಹಿತ್ಯ: ಸಾಹಿತಿ ಬರಗೂರು




ಶಿರಾ: ಅಧ್ಯಯನ ಹೊಂದಿರುವುದರಿಂದ ಮಾತ್ರ ಉತ್ತಮ ಸಾಹಿತ್ಯ ಸೃಷ್ಟಿಸಲು ಸಾಧ್ಯವಿಲ್ಲ. ಅಧ್ಯಯನದ ಜೊತೆಗೆ ಅನುಭವ ಹಾಗೂ ಅದನ್ನು ಸಮರ್ಥವಾಗಿ ಅಭಿವ್ಯಕ್ತಿಸುವ ಸಾಮರ್ಥ್ಯ ಹೊಂದಿದಾಗ ಮಾತ್ರ ಪರಿಣಾಮಕಾರಿ ಮತ್ತು ಉತ್ತಮವಾದ ಸಾಹಿತ್ಯವನ್ನು ನೀಡಲು ಸಾಧ್ಯ ಎಂದು ನಾಡೋಜ ಪ್ರೊ. ಬರಗೂರು ರಾಮಚಂದ್ರಪ್ಪ ಅಭಿಪ್ರಾಯಪಟ್ಟರು.

ಶಿರಾ ತಾಲ್ಲೂಕಿನ ಪಟ್ಟನಾಯಕನಹಳ್ಳಿಯ ಶಾಂತಿನಿಕೇತನ ಪಬ್ಲಿಕ್ ಸ್ಕೂಲ್‌ನ ನಾಡೋಜ ಪ್ರೊ. ಬರಗೂರು ರಾಮಚಂದ್ರಪ್ಪ ಸಭಾಂಗಣದಲ್ಲಿ ನಾಡೋಜ ಬರಗೂರು ಮೇಷ್ಟ್ರು ಬಳಗ ಹಾಗೂ ಶಿರಾ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಇವರ ಸಂಯುಕ್ತ ಆಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸಾಹಿತ್ಯ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಾಹಿತ್ಯ ಸೃಷ್ಟಿಗೆ ಕೇವಲ ಕಲ್ಪನೆ ಅಥವಾ ಭಾಷಾ ಜ್ಞಾನವಷ್ಟೇ ಸಾಕಾಗುವುದಿಲ್ಲ. ಬದುಕಿನ ಅನುಭವಗಳನ್ನು ಸೂಕ್ಷ್ಮವಾಗಿ ಗಮನಿಸುವ ಮನಸ್ಸು, ಆ ಅನುಭವಗಳ ಹಿಂದಿರುವ ಸಾಮಾಜಿಕ ವಾಸ್ತವಗಳನ್ನು ಅರಿಯುವ ಅಧ್ಯಯನ ಮತ್ತು ತನ್ನ ಆಲೋಚನೆಗಳನ್ನು ಪರಿಣಾಮಕಾರಿಯಾಗಿ ಅಭಿವ್ಯಕ್ತಿಸುವ ಸಾಮರ್ಥ್ಯ ಈ ಮೂರೂ ಒಂದಾಗಬೇಕು. ಆಗ ಮಾತ್ರ ನಿಜವಾದ ಸಾಹಿತ್ಯ ಸೃಷ್ಟಿಯಾಗಲು ಸಾಧ್ಯ ಎಂದು ಬರಗೂರು ರಾಮಚಂದ್ರಪ್ಪ ಹೇಳಿದರು.

ಹೊಸ ತಲೆಮಾರಿನ ಯುವ ಸಾಹಿತಿಗಳು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳುವುದರ ಜೊತೆಗೆ ತಮ್ಮದೇ ಆದ ಚಿಂತನೆ ಹಾಗೂ ಅಭಿವ್ಯಕ್ತಿಯ ಮೂಲಕ ಸಾಹಿತ್ಯ ಕ್ಷೇತ್ರಕ್ಕೆ ಹೊಸ ಆಯಾಮ ನೀಡಬೇಕು ಎಂದು ಕರೆ ನೀಡಿದರು.

ಸಾಹಿತ್ಯ ಸೃಜನಶೀಲತೆ ಮತ್ತು ಸಾಮಾಜಿಕ ಜವಾಬ್ದಾರಿ ಕುರಿತು ಚರ್ಚೆ ಕಾರ್ಯಕ್ರಮದಲ್ಲಿ ಸಾಹಿತ್ಯ ಸೃಜನಶೀಲತೆ ಮತ್ತು ಸಾಮಾಜಿಕ ಜವಾಬ್ದಾರಿ' ಎಂಬ ವಿಷಯದ ಕುರಿತು ಗುಲ್ಬರ್ಗ ಕೇಂದ್ರೀಯ ವಿಶ್ವವಿದ್ಯಾಲಯದ ಸಹ ಪ್ರಾಧ್ಯಾಪಕ ಡಾ. ಕಿರಣ್ ಎಂ. ಗಾಜನೂರು ಮಾತನಾಡಿದರು.

ಸಾಹಿತ್ಯ ಸೃಜನಶೀಲತೆ ವ್ಯಕ್ತಿಯ ವೈಯಕ್ತಿಕ ಪ್ರತಿಭೆಯ ಫಲವಾಗಿದ್ದರೂ ಅದು ಸಮಾಜದಿಂದ ಪ್ರತ್ಯೇಕವಾಗಿರಲು ಸಾಧ್ಯವಿಲ್ಲ. ಸಮಾಜದ ನೋವು, ಸಂಘರ್ಷ, ಆಶಯಗಳು ಹಾಗೂ ಬದಲಾವಣೆಗಳು ಸಾಹಿತ್ಯದ ಮೇಲೆ ಪ್ರಭಾವ ಬೀರುತ್ತವೆ. ಹೀಗಾಗಿ ಸಾಹಿತಿಗಳಿಗೆ ಸಾಮಾಜಿಕ ಜವಾಬ್ದಾರಿಯೂ ಇದೆ ಎಂಬ ವಿಚಾರವನ್ನು ಅವರು ವಿವರಿಸಿದರು.

ಕನ್ನಡ ಸಾಹಿತ್ಯ ಪರಂಪರೆ ಮತ್ತು ಸಮಕಾಲೀನ ಪ್ರಜ್ಞೆ ಎಂಬ ವಿಷಯದ ಕುರಿತು ಚಿತ್ರದುರ್ಗ ಸರ್ಕಾರಿ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಕರಿಯಪ್ಪ ಮಾಳಿಗೆ ಮಾತನಾಡಿದರು.

ಕನ್ನಡ ಸಾಹಿತ್ಯದ ಶ್ರೀಮಂತ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವುದರ ಜೊತೆಗೆ ಸಮಕಾಲೀನ ಸಮಾಜದ ಪ್ರಶ್ನೆಗಳಿಗೆ ಸ್ಪಂದಿಸುವ ಅಗತ್ಯವಿದೆ. ಸಾಹಿತ್ಯ ಪರಂಪರೆಯ ಅರಿವಿನೊಂದಿಗೆ ಇಂದಿನ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಮಾನವೀಯ ವಿಚಾರಗಳನ್ನು ಅರ್ಥೈಸಿಕೊಂಡು ಬರವಣಿಗೆ ನಡೆಸಿದಾಗ ಸಾಹಿತ್ಯ ಹೆಚ್ಚು ಪ್ರಸ್ತುತವಾಗುತ್ತದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿರಾ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಪಿ. ಪಾಂಡುರಂಗಯ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಡಾ. ಭುವನಹಳ್ಳಿ ನಾಗರಾಜ್, ಡಾ. ಶೈಲಾ ನಾಗರಾಜ್, ಡಾ. ನಾಗರಾಜು ಬಗ್ಗನಡು, ನರೇಶ್ ಬಾಬು, ರೂಪೇಶ್ ಕೃಷ್ಣಯ್ಯ ಸೇರಿದಂತೆ ತಾಲ್ಲೂಕಿನ ಸಾಹಿತಿಗಳು, ಯುವ ಸಾಹಿತಿಗಳು, ಲೇಖಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಕಾವೇರಿ ನೀರು ಬಿಡುಗಡೆ: ಜಲಾಶಯಗಳ ಮಟ್ಟ ಕುಸಿತ



ಬೆಂಗಳೂರು: ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಕೊರತೆ ಹಾಗೂ ಜಲಾಶಯಗಳ ನೀರಿನ ಸಂಗ್ರಹ ಕಡಿಮೆಯಾಗುತ್ತಿರುವ ನಡುವೆ, ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ವಿಚಾರ ಮತ್ತೆ ಚರ್ಚೆಗೆ ಬಂದಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ನಿರ್ದೇಶನದ ಹಿನ್ನೆಲೆಯಲ್ಲಿ ಕರ್ನಾಟಕದಿಂದ ದಿನಕ್ಕೆ ಸುಮಾರು 9,000 ಕ್ಯೂಸೆಕ್ ನೀರು ಹರಿಸಲಾಗುತ್ತಿದೆ ಎಂದು ವರದಿಯಾಗಿದೆ. ಕೆಆರ್‌ಎಸ್, ಕಬಿನಿ ಸೇರಿದಂತೆ ಪ್ರಮುಖ ಜಲಾಶಯಗಳ ನೀರಿನ ಮಟ್ಟ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ರೈತರು ಹಾಗೂ ವಿವಿಧ ಸಂಘಟನೆಗಳು ಆತಂಕ ವ್ಯಕ್ತಪಡಿಸಿವೆ. ನೀರು ಬಿಡುಗಡೆ ಹಿನ್ನೆಲೆಯಲ್ಲಿ ರಾಜ್ಯದ ಕೃಷಿ, ಕುಡಿಯುವ ನೀರು ಹಾಗೂ ಮುಂದಿನ ದಿನಗಳ ನೀರಿನ ಲಭ್ಯತೆ ಕುರಿತು ಕಳವಳ ಹೆಚ್ಚಾಗಿದೆ. ನೀರಿನ ಒಳಹರಿವು, ಜಲಾಶಯಗಳ ಸಂಗ್ರಹ ಮತ್ತು ಮಳೆಯ ಪ್ರಮಾಣವನ್ನು ಗಮನದಲ್ಲಿಟ್ಟುಕೊಂಡು ಮುಂದಿನ ದಿನಗಳಲ್ಲಿ ನೀರು ನಿರ್ವಹಣೆ ಮಾಡುವ ಅಗತ್ಯವಿದೆ.

# ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್: ಯಾದಗಿರಿ ಜಿಲ್ಲಾ ಕಾಂಗ್ರೆಸ್ ಪ್ರತಿಭಟನೆ




ಯಾದಗಿರಿ: ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವುದನ್ನು ಖಂಡಿಸಿ ಯಾದಗಿರಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು. ಈ ವೇಳೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕೇಂದ್ರ ಸರ್ಕಾರ ಮತ್ತು ಬಿಜೆಪಿ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಾಹುಲ್ ಗಾಂಧಿ ವಿರುದ್ಧ ದಾಖಲಿಸಿರುವ ಎಫ್‌ಐಆರ್ ರಾಜಕೀಯ ಪ್ರೇರಿತ ಕ್ರಮವಾಗಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು, ಪ್ರಕರಣವನ್ನು ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಪಕ್ಷಗಳ ಧ್ವನಿಗೆ ಅವಕಾಶ ನೀಡಬೇಕು. ಭಿನ್ನಾಭಿಪ್ರಾಯ ವ್ಯಕ್ತಪಡಿಸುವವರ ವಿರುದ್ಧ ಪ್ರಕರಣ ದಾಖಲಿಸುವ ಮೂಲಕ ಧ್ವನಿ ಹತ್ತಿಕ್ಕುವ ಪ್ರಯತ್ನ ಮಾಡಬಾರದು ಎಂದು ಕಾಂಗ್ರೆಸ್ ಮುಖಂಡರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯ ಕಾರ್ಯಕರ್ತರು ಭಾಗವಹಿಸಿದ್ದರು.

# ಗುಣಮಟ್ಟದ ಹಾಲು ಉತ್ಪಾದನೆಗೆ ಎಸ್.ಆರ್.ಗೌಡ ಕರೆ



ಶಿರಾ : ಹಾಲು ಉತ್ಪಾದಕ ಸಂಘಗಳ ಆರ್ಥಿಕ ಪ್ರಗತಿಗೆ ಉತ್ಪಾದಕರ ಸಹಕಾರ ಅತ್ಯಗತ್ಯ, ಗುಣಮಟ್ಟದ ಹಾಲು ಡೇರಿಗೆ ಹಾಕುವ ಮೂಲಕ ಉತ್ಪಾದಕರು ಆರ್ಥಿಕವಾಗಿ ಸಬಲರಾಗಬೇಕು.

ಪಾರದರ್ಶಕ ಆಡಳಿತ ನೀಡುವತ್ತ ಸಂಘಗಳು ಹೆಚ್ಚು ಕಾಳಜಿ ವಹಿಸಿ ಜನಸ್ನೇಹಿ ಸೇವೆ ಸಂಘಗಳ ಅಭಿವೃದ್ಧಿಗೆ ಪೂರಕ ವಾತಾವರಣ ಕಲ್ಪಿಸಲಿದೆ ಎಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಎಸ್.ಆರ್. ಗೌಡ ಹೇಳಿದರು.

ಶಿರಾ ತಾಲೂಕಿನ ಹಾರೋಗೆರೆ ಹಾಲು ಉತ್ಪಾದಕರ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಮಂಗಳವಾರ ಉದ್ಘಾಟಿಸಿ, ಹೈನುಗಾರಿಕೆ ಬಗ್ಗೆ ಮಾಹಿತಿ ನೀಡಿ ಮಾತನಾಡಿದರು.

ಹಾಲು ಉತ್ಪಾದಕ ಕುಟುಂಬಗಳ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹೆಚ್ಚು ಆದ್ಯತೆ ನೀಡಲಾಗಿದ್ದು ,ಎಸ್‌ಎಸ್‌ಎಲ್‌ಸಿ, ಪಿಯುಸಿ, ಇಂಜಿನಿಯರಿಂಗ್, ಪದವಿ, ಡಾಕ್ಟರ್ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವುದರ ಜೊತೆಗೆ, ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಸುಸಜ್ಜಿತ ಹಾಸ್ಟೆಲ್ ಸೌಲಭ್ಯ ಹಾಗೂ ರಾಸುಗಳ ವಿಮೆ ಸೇರಿದಂತೆ ಹಾಲು ಉತ್ಪಾದಕರ ಸರ್ವತೋಮುಖ ಹಿತ ಕಾಪಾಡುವುದೇ ನಮ್ಮ ಧ್ಯೇಯ ಎಂದರು.

ವಿಸ್ತರಣಾಧಿಕಾರಿ ಚೈತ್ರ, ಹಾರೋಗೆರೆ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಮುದ್ದರಾಜು, ಉಪಾಧ್ಯಕ್ಷ ರಾಮಚಂದ್ರಪ್ಪ, ಸದಸ್ಯರಾದ ರಾಮಣ್ಣ ,ಎಚ್. ಡಿ. ಮಂಜುನಾಥ್, ಬಿ. ಸಿ. ವ ರುಣ್, ಎಚ್ .ಡಿ. ರಾಜಶೇಖರ್, ಬಿ.ಜಿ. ರಾಜಣ್ಣ, ಕಾಂತರಾಜು ,ಗೋವಿಂದಪ್ಪ, ಮೋಹನ್ ಕುಮಾರ್, ದೇವರಾಜು, ಮಂಗಳಮ್ಮ, ಜಯಲಕ್ಷ್ಮಿ, ಸಮಾಲೋಚಕ ಬಾಬಾ ಫಕ್ರುದ್ದೀನ್ ಪಿ.ಎಂ, ಹನುಮಂತರಾಯ, ಮುಖಂಡ ಪ್ರಕಾಶ್ ಸಂಘದ ಕಾರ್ಯದರ್ಶಿ ಹೆಚ್ .ಬಿ. ಸಿದ್ದೇಶ್ ಸೇರಿದಂತೆ ಹಲವಾರು ಮುಖಂಡರು ಹಾಲು ಉತ್ಪಾದಕ ಸಂಘದ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಇಂದು ಜಿಲ್ಲಾ ಪುರಸ್ಕಾರ, ಹಾಗೂ ಸೇವಾ ಪದಕ ಪ್ರದಾನ

ದಾವಣಗೆರೆ: ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಜಿಲ್ಲಾ ಪುರಸ್ಕಾರ, ಪ್ರಶಸ್ತಿ ಪತ್ರ ಹಾಗೂ ಸೇವಾ ಪದಕ ಪ್ರದಾನ ಸಮಾರಂಭವನ್ನು ಸೆಪ್ಟೆಂಬರ್ 2ರಂದು ಬೆಳಗ್ಗೆ 11.30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ತುಂಗಭದ್ರಾ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತರಾದ ಡಾ. ಪಿ.ಜಿ.ಆರ್. ಸಿಂಧ್ಯಾ ಉದ್ಘಾಟಿಸಲಿದ್ದಾರೆ. ಜಿಲ್ಲಾ ಪುರಸ್ಕಾರ ಹಾಗೂ ಪ್ರಶಸ್ತಿ ಪತ್ರಗಳನ್ನು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಅವರು ವಿತರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ದೂಡ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಅಧ್ಯಕ್ಷ ಬದ್ರಿನಾಥ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಬಿ.ಹೆಚ್. ಕೃಷ್ಣಪ್ರಸಾದ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪಳನಿವೇಲು ದೊರೆಸ್ವಾಮಿ ಸೇರಿದಂತೆ ಗಣ್ಯರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ದಾವಣಗೆರೆಯ ಜಿಲ್ಲಾ ಮುಖ್ಯ ಆಯುಕ್ತರಾದ ಮುರುಘರಾಜೇಂದ್ರ ಜೆ. ಚಿಗಟೇರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸ್ಕೌಟ್ಸ್ ಮತ್ತು ಗೈಡ್ಸ್ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರು ಹಾಗೂ ವಿವಿಧ ಚಟುವಟಿಕೆಗಳಲ್ಲಿ ಸಾಧನೆ ಮಾಡಿದವರಿಗೆ ಈ ಸಂದರ್ಭದಲ್ಲಿ ಜಿಲ್ಲಾ ಪುರಸ್ಕಾರ, ಪ್ರಶಸ್ತಿ ಪತ್ರ ಮತ್ತು ಸೇವಾ ಪದಕಗಳನ್ನು ಪ್ರದಾನ ಮಾಡಲಾಗುವುದು ಎಂದು ಆಯೋಜಕರು ತಿಳಿಸಿದ್ದಾರೆ.

ಅನಂತ ಜನಶಕ್ತಿ



## ಗದಗ ಜಿಲ್ಲೆಯಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಬರ ವೀಕ್ಷಣೆ ಬರಪೀಡಿತ ತಾಲೂಕು ಘೋಷಣೆ ಭರವಸೆ



ಗದಗ: ಜಿಲ್ಲೆಯಲ್ಲಿ ಭೀಕರ ಬರ ಪರಿಸ್ಥಿತಿ ಹಾಗೂ ತೀವ್ರ ಬೆಳೆ ಹಾನಿಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗದಗ ಹಾಗೂ ಮುಂಡರಗಿ ತಾಲೂಕಿನ ವಿವಿಧ ಕೃಷಿ ಭೂಮಿಗಳಿಗೆ ನೇರ ಭೇಟಿ ನೀಡಿ ಸ್ಥಿತಿಗತಿಯನ್ನು ಅವಲೋಕಿಸಿದರು. ಸ್ಥಳೀಯ ರೈತರ ಅಹವಾಲು ಸ್ವೀಕರಿಸಿದ ಅವರು, ಬರ ಪರಿಸ್ಥಿತಿ ಅಧ್ಯಯನ ಮಾಡಿದ ಬಳಿಕ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಿ, ಅವರ ಮಾರ್ಗಸೂಚಿಯಂತೆ ಶೀಘ್ರವೇ ಬರಪೀಡಿತ ತಾಲೂಕುಗಳನ್ನು ಘೋಷಣೆ ಮಾಡಲಾಗುವುದು ಎಂದು ಭರವಸೆ ನೀಡಿ–ದರು.

ಬರ ವೀಕ್ಷಣೆ ವೇಳೆ ಸಿಎಂ ಅವರು ಮುಂಡರಗಿ ತಾಲೂಕಿನ ಕದಾಂಪೂರ ಗ್ರಾಮದಲ್ಲಿ ಶಂಕರಪ್ಪ ಗಾವರವಾಡ ಅವರ ಜಮೀನಿನ ಸೂರ್ಯಕಾಂತಿ, ಸುನೀತಾ ಪೂಜಾರ ಅವರ ಮೆಕ್ಕೆಜೋಳ ಹಾಗೂ ಕಲ್ಲಪ್ಪ ಕಾಡಾಪ್ಪಗೋಳ ಅವರ ಹತ್ತಿ ಬೆಳೆಯನ್ನು ಸ್ವತಃ ವೀಕ್ಷಿಸಿದರು. ನಂತರ ಗದಗ ತಾಲೂಕಿನ ಕುರ್ತಕೋಟಿ ಗ್ರಾಮದ ಶ್ರೀನಾಥ ಮಾರ್ತಾಂಡಗೌಡ ಅವರ ಶೇಂಗಾ, ಹತ್ತಿ, ಮೆಣಸಿನಕಾಯಿ ಹಾಗೂ ಹುಲಕೋಟಿ ಗ್ರಾಮದ ಹನುಮಂತಪ್ಪ ಸೋಗಿನ ಅವರ ಮೆಕ್ಕೆಜೋಳ ಬೆಳೆಯನ್ನು ಪರಿಶೀಲಿಸಿ ರೈತರೊಂದಿಗೆ ಚರ್ಚಿಸಿದರು.

ಈ ಬಾರಿ ಮಳೆಯ ಅಭಾವದಿಂದ ಬೆಳೆಗಳು ಸಂಪೂರ್ಣ ಹಾಳಾಗಿದ್ದು, ಗದಗ ಜಿಲ್ಲೆಯ ಉಳಿದ ಆರು ತಾಲೂಕುಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಿಸಬೇಕು ಎಂದು ರೈತರು ಸಿಎಂ ಅವರಲ್ಲಿ ಮನವಿ ಮಾಡಿದರು. ರೈತರ ಕಷ್ಟಕ್ಕೆ ಸ್ಪಂದಿಸಿದ ಮುಖ್ಯಮಂತ್ರಿಗಳು, ಇನ್ನುಳಿದ ಪ್ರದೇಶಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಕೇಂದ್ರದ ನಿಯಮಾವಳಿಗಳ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ, ಶಾಸಕರಾದ ಎಚ್.ಕೆ. ಪಾಟೀಲ, ಸಿ.ಸಿ. ಪಾಟೀಲ, ಎನ್.ಎನ್. ಕೋನರಡ್ಡಿ, ಪ್ರಾದೇಶಿಕ ಆಯುಕ್ತೆ ಜಾನಕಿ ಎಸ್., ಐಜಿಪಿ ಸಂದೀಪ್ ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ. ಸಿಇಒ ಮುಕುಲ್ ಜೈನ್, ಎಸ್‌ಪಿ ಮಿತುನ್ ಎಚ್.ಎನ್., ಡಿಸಿಎಫ್ ಸಂತೋಷ ಕುಮಾರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ. ಹಾಗೂ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಸೇರಿದಂತೆ ಹಲವು ಪ್ರಮುಖ ಅಧಿಕಾರಿಗಳು ಹಾಜರಿದ್ದರು

## ಹುಣಸೂರು ತಾಲೂಕು ದಸಂಸ ಪುನರ್‌ರಚನೆ



ಹುಣಸೂರು: ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಲಕ್ಷ್ಮೀನಾರಾಯಣ ನಾಗವರ ಬಣ) ಹುಣಸೂರು ತಾಲೂಕು ಹಾಗೂ ನಗರ ಸಮಿತಿ ಪುನರ್‌ರಚನಾ ಸಭೆ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ದಸಂಸ ರಾಜ್ಯ ಸಂಘಟನಾ ಸಂಚಾಲಕ ದೇವಗಳ್ಳಿ ಸೋಮಶೇಖರ್, ಹುಣಸೂರು ಸುತ್ತಮುತ್ತಲ ಪ್ರದೇಶಗಳಲ್ಲಿ ಅಸ್ಪೃಶ್ಯತೆ, ಮೌಢ್ಯತೆ, ಜಾತೀಯತೆ ಹಾಗೂ ಸಾಮಾಜಿಕ ಅಸಮಾನತೆಗಳು ಇನ್ನೂ ಕಂಡುಬರುತ್ತಿದ್ದು, ಜನರಲ್ಲಿ ಜಾಗೃತಿ ಮೂಡಿಸಲು ಕಾರ್ಯಕರ್ತರು ಮುಂದಾಗಬೇಕು ಎಂದು ಕರೆ ನೀಡಿದರು. ಸಂವಿಧಾನದತ್ತ ಮೀಸಲಾತಿ ಸೇರಿದಂತೆ ಹಕ್ಕುಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಜಿಲ್ಲಾ ಸಂಚಾಲಕ ಎಸ್.ಡಿ. ಸಣ್ಣಸ್ವಾಮಿ ಸರಗೂರು ಅವರು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು. ಸಭೆಯಲ್ಲಿ ಮೈಸೂರು ಜಿಲ್ಲಾ ಸಂಘಟನಾ ಸಂಚಾಲಕ ದೇವರಾಜ್ ಮಲ್ಲಾಡಿ, ಆಲಗೂಡು ಶಿವಣ್ಣ, ಬೊಕ್ಕಳ್ಳಿ ಲಿಂಗಯ್ಯ, ಪುಟ್ಟ ಮಾದಯ್ಯ ಬುಗತಗಳ್ಳಿ, ರತ್ನಮ್ಮ ಅಂಬೇಡ್ಕರ್ ನಗರ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಹುಣಸೂರು ತಾಲೂಕು ಸಂಚಾಲಕರಾಗಿ ಕಿರಣ್ ಕಟ್ಟೆಮಳಲವಾಡಿ, ಸಂಘಟನಾ ಸಂಚಾಲಕರಾಗಿ ದೇವರಾಜ್ ಹಾರೋಹಳ್ಳಿ, ಸಿಂಗ್ರಯ್ಯ ಮುಳ್ಳೂರು ಹಾಗೂ ಕೃಷ್ಣ ಚಿಕ್ಕಡಗನಹಳ್ಳಿ, ಖಜಾಂಚಿಯಾಗಿ ಲೋಹಿತ್ ಮಂಗಳೂರುಮಾಳ ಆಯ್ಕೆಯಾದರು. ಕಾರ್ಯಕಾರಿ ಸಮಿತಿ ಸದಸ್ಯರಾಗಿ ತಟ್ಟೆಕೆರೆ ನಾಗರಾಜ್, ಮಾರನಹಳ್ಳಿ ಶಿವಣ್ಣ ಹಾಗೂ ರಾಮಕೃಷ್ಣ ಬೀರನಹಳ್ಳಿ ಆಯ್ಕೆಯಾದರು.

ಹುಣಸೂರು ನಗರ ಸಂಚಾಲಕರಾಗಿ ನಿವೃತ್ತ ಗ್ರಾಮ ಲೆಕ್ಕಾಧಿಕಾರಿ ದೇವರಾಜ್ ಹಾಗೂ ಸಂಘಟನಾ ಸಂಚಾಲಕರಾಗಿ ಜವರಯ್ಯ ಮಾರೂರು, ಮಂಜಣ್ಣ ಕರುಣಕುಪ್ಪೆ ಮತ್ತು ಶಿವಣ್ಣ ನರಸಿಂಹಬಡಾವಣೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

## ಕಬಿನಿ ಡ್ಯಾಂಗೆ ರೈತರ ಮುತ್ತಿಗೆ



ಮೈಸೂರು: ತಮಿಳುನಾಡಿಗೆ ನೀರು ಹರಿಸುವುದನ್ನು ನಿಲ್ಲಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಕರ್ತರು ಕಬಿನಿ ಜಲಾಶಯಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಡ್ಯಾಂ ಮುಂಭಾಗ ಕುಳಿತು ತಹಶೀಲ್ದಾರ್ ಶ್ರೀನಿವಾಸ್ ಹಾಗೂ ಕಬಿನಿ ಎಂಜಿನಿಯರ್‌ಗಳು ಮತ್ತು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ರೈತರು, ಸಂಪೂರ್ಣ ಭರ್ತಿಯಾಗಿದ್ದ ಜಲಾಶಯವನ್ನು ನೀರು ಹರಿಸಿ ಖಾಲಿ ಮಾಡಲಾಗುತ್ತಿದೆ ಎಂದು ಆರೋಪಿಸಿದರು. ತಮಿಳುನಾಡಿಗೆ ನೀರು ಹರಿಸುವ ವಿಚಾರದಲ್ಲಿ ರಾಜ್ಯ ಸರ್ಕಾರದ ಧೋರಣೆಯನ್ನು ಖಂಡಿಸಿ, ಕೂಡಲೇ ನೀರು ಹರಿಸುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

# ಸರ್ಕಾರ ಮಂಜೂರು ಮಾಡಿದ ಜಮೀನಿನಲ್ಲಿ ಕೃಷಿ ಚಟುವಟಿಕೆಗೆ ಅವಕಾಶ ನೀಡಿ : ಆಂದ್ರಾಳ್ ಗ್ರಾಮದ ರೈತರ ಮನವಿ



ಬಳ್ಳಾರಿ : ದಲಿತ ಮತ್ತು ಹಿಂದುಳಿದ ವರ್ಗಕ್ಕೆ ಕಡುಬಡತನಕ್ಕೆ ಸೇರಿದ್ದು, ಹಾಗೂ ಜೀವನಧಾರಕ್ಕೆ ಅಂಡ್ರಾಳು ಗ್ರಾಮದ ಸರ್ವೆ ನಂ.101ಎ, 102, 96, 97, 98ಎ ರ ಇದೇ ಜಮೀನುಗಳನ್ನು ನಂಬಿಕೊಂಡು ನಾವುಗಳು ಸುಮಾರು ವರ್ಷಗಳಿಂದ ಅಂ–ದರೆ ನಮ್ಮ ತಾತನವರ ಕಾಲದಿಂದಲೂ ನಮ್ಮನ್ನು ಮಾನ್ಯ ಜಿಲ್ಲಾಧಿಕಾರಿ ಬಳ್ಳಾರಿ ಇವರು 1960 ರಿಂದ 1975ರವರೆಗೆ ಸದರಿ ಸಾಗುವಳಿ ಭೂಮಿಯನ್ನು ಜಿಲ್ಲಾಧಿಕಾರಿ ಆದೇಶದ ಪ್ರಕಾರ ನಮ್ಮ ತಾತನವರಿಗೆ ಮಾನ್ಯ ವಿಶೇಷ ತಹಶೀಲ್ದಾರರು ಬಳ್ಳಾರಿ ಇವರಿಂದ ನಮ್ಮ ಹೆಸರಿಗೆ ಪಟ್ಟಾ ನೀಡಿ, ಪಹಣಿ ಪಟ್ಟಾ ಮತ್ತು ಸಾಗುವಳಿ ಭೂಮಿಯನ್ನು ಮಾಡುತ್ತಾ ಬಂದಿರುತ್ತೇವೆ. ಮತ್ತು ನಮ್ಮ ತಂದೆ ತಾತನವರ ಕಾಲದಿಂದಲೂ ಭೂಮಿಯನ್ನು ಸಾಗುವಳಿ ಮಾಡುತ್ತಿರುವುದರಿಂದ ನಮಗೆ 9 ಜನವರಿ 1981 ರಂದು ನಮಗೆ ಪಟ್ಟಾ ಮತ್ತು ಸಾಗುವಳಿ ಮಾಡುತ್ತಿರುವ ಜಮೀನುಗಳಿಗೆ ಪಹಣಿಯಲ್ಲಿ ಸಾಗುವಳಿದಾರರ ಕಲಂನಲ್ಲಿ ನಮ್ಮ ಹೆಸರು ನೊಂದಾಯಿಸಿರುತ್ತದೆ ಕಾರಣ ಈ ಜಮೀನಿನಲ್ಲಿ ನಮಗೆ ಕೃಷಿ ಚಟುವಟಿಕೆಯನ್ನು ನಡೆಸಲು ಅವಕಾಶ ಕಲ್ಪಿಸಿ ಕೊಡಬೇಕೆಂದು ಕಂದಾಯ ಸಚಿವರಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಮನೆ ಪತ್ರ ಸಲ್ಲಿಸಿದರು. ಇಂದು ಬಳ್ಳಾರಿ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿ ಮಾತನಾಡಿದ ಅಂದ್ರ ಗ್ರಾಮದ ರೈತರು

ಕಂದಾಯ ಇಲಾಖೆಯ ನಮ್ಮ ಹೆಸರಿಗೆ ಪಟ್ಟಾ ಮತ್ತು ಸಾಗುವಳಿ ಮಾಡುತ್ತಿರುವ ಭೂಮಿಗೆ ಗುತ್ತಿಗೆಯನ್ನು 1981ನೇ ಸಾಲಿನಿಂದ ಇಲ್ಲಿಯವರೆಗೆ ಖಾತೆ ಸಂಖ್ಯೆ 71ಕ್ಕೆ ಮೈಸೂರು ಸರ್ಕಾರದ ಖಾತೆಗೆ ರೈತರು ಆದ ನಾವು ಕಂದಾಯವನ್ನು ಪಾವತಿಸಿಕೊಂಡು ಬಂದಿರುತ್ತೇವೆ. ಹಾಗೂ ನಮಗೆ ಈ ಜಮೀನುಗಳು ಕುಟುಂಬದ ಜೀವನದ ಆಧಾರವಾಗಿದ್ದು, ಈ ಜಮೀನು ಹೊರತು ಪಡಿಸಿ, ನಮಗೆ ಬೇರೆ ಯಾವುದೇ ಆದಾಯ ಮತ್ತು ಆಸ್ತಿ ಪಾಸ್ತಿಗಳು ಇರುವುದಿಲ್ಲ.ಈ ಜಮೀನುಗಳು ಬಿಟ್ಟು ಬೇರೆ ಆದಾಯದ ಮೂಲಗಳು ಸಹ ಇರುವುದಿಲ್ಲ. ಕಡುಬಡವರಾಗಿರುವ ನಮ್ಮ ಕಷ್ಟವನ್ನು ಪರಿಗಣಿಸಿ, ಮಾನ್ಯರಾದ ತಾವುಗಳು ಸುಮಾರು 60 ವರ್ಷಗಳಿಂದ ಪಟ್ಟಾ ಮತ್ತು ಸಾಗುವಳಿ ಭೂಮಿಯನ್ನು ಸಾಗುವಳಿ ಮಾಡುತ್ತಿರುವ ನಮ್ಮ ಕುಟುಂಬದ ಆಧಾರವಾಗಿರುವ ಜಮೀನುಗಳನ್ನು ಸರ್ಕಾರ ವಶಪಡಿಸಿಕೊಳ್ಳದೆ ಕೃಷಿ ಚಟುವಟಿಕೆ ಮಾಡಲು ನಮಗೆ ಅವಕಾಶ ಕಲ್ಪಿಸಿ ಕೊಡಬೇಕೆಂದು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು.

ಮತ್ತು ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಮಾನ್ಯ ಪ್ರಧಾನ ಸಿವಿಲ್ ಜಡ್ಜ್ ಮತ್ತುಜೆ. ಎಂ.ಎಫ್.ಸಿ. ಬಳ್ಳಾರಿ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂದ ಯಾವುದೇ ರೀತಿಯ ತೆರವುಗೊಳಿಸದಂತೆ ಸದರಿ ಜಮೀನುಗಳ ದಾಖಲೆಗಳನ್ನು ಕೂಲಂಕುಷವಾಗಿ, ನ್ಯಾಯಯುತವಾಗಿ ಪರಿಶೀಲಿಸಿ, ಕಡುಬಡವರಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗ ಸಮುದಾಯದ ನಮ್ಮನ್ನು ಪರಿಗಣಿಸಿ, ನಮ್ಮ ಜಮೀನುಗಳನ್ನು ತೆರವುಗೊಳಿಸಾದೆ ಕೃಷಿ ಚಟುವಟಿಕೆಗೆ ನಮ್ಮ ಕುಟುಂಬಗಳಿಗೆ ಅವಕಾಶ ಮಾಡಿಕೊಡಬೇಕೆಂದು ಕಂದಾಯ ಸಚಿವರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹನುಮಪ್ಪ ರಾಮನ್ಗೌಡ ಗಾದಿಲಿಂಗಪ್ಪ, ಸುಮಲತಾ ಹೊನ್ನೂರಪ್ಪ ಇರಿ ಸ್ವಾಮಿ, ಗಂಗಣ್ಣ ಬಾಬು ಶ್ರೀನಿವಾಸಲು ಶಂಕರ್ ಸೀತಾರಾಮ ಹಂಪಮ್ಮ ಸೇರಿದಂತೆ ಹಲವಾರು ಜನ ರೈತರಿದ್ದರು.

# ರಾಯಚೂರಿನಲ್ಲಿ ದಲಿತರ ಮೇಲಿನ ದೌರ್ಜನ್ಯ ತಡೆಗೆ ಸುರೇಶ್ ಕುಮಾರ್ ಆಗ್ರಹ



ಬಳ್ಳಾರಿ : ರಾಯಚೂರು ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ, ಅತ್ಯಾಚಾರ ಹಾಗೂ ಸರಣಿ ಕೊಲೆ ಪ್ರಕರಣಗಳು ಹೆಚ್ಚುತ್ತಿರುವುದನ್ನು ಖಂಡಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಬಳ್ಳಾರಿ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.ನಗರದ ಮಾರ್ಡ್ವ್ ಹೋಟೆಲ್‌ನಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಆವರಣದವರೆಗೆ ಪ್ರತಿಭಟನಾಕಾರರು ರ್ಯಾಲಿ ನಡೆಸಿ, ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವಲ್ಲಿ ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಬಳ್ಳಾರಿ ಜಿಲ್ಲಾಧ್ಯಕ್ಷ ಸುರೇಶ್ ಕುಮಾರ್ ಆಗ್ರಹಿಸಿದರು. ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ಸುಮಾರು 8 ಸಾವಿರಕ್ಕೂ ಅಧಿಕ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 327 ದಲಿತ ಹತ್ಯೆ ಹಾಗೂ 620 ದಲಿತ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳು ನಡೆದಿವೆ ರಾಯಚೂರು ಜಿಲ್ಲೆಯಲ್ಲಿ ಭೂನಂದ, ಯುವತಿ ಆಶ್ವಿನಿ ಹಾಗೂ ರಾಣೆಮ್ಮ ಅವರ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳನ್ನು ಉಲ್ಲೇಖಿಸಿದ ಪ್ರತಿಭಟನಾಕಾರರು, ಇಂತಹ ಘಟನೆಗಳು ರಾಜ್ಯದಲ್ಲಿ ದಲಿತ ಸಮುದಾಯದ ಸುರಕ್ಷತೆ ಕುರಿತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿವೆ ಎಂದು ಹೇಳಿದರು.

ದಲಿತರಿಗೆ ಸೂಕ್ತ ರಕ್ಷಣೆ ಮತ್ತು ಭದ್ರತೆ ಒದಗಿಸಬೇಕು. ಮೃತರ ಕುಟುಂಬಗಳಿಗೆ ಸರ್ಕಾರದಿಂದ ಅಗತ್ಯ ಆರ್ಥಿಕ ನೆರವು ನೀಡುವುದರ ಜೊತೆಗೆ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕಲ್ಪಿಸಬೇಕು ಎಂದು ಸಂಘಟನೆ ಆಗ್ರಹಿಸಿತು.ಪ್ರತಿಭಟನೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಬಳ್ಳಾರಿ ಜಿಲ್ಲಾ ಸಮಿತಿಯ ತಾಲೂಕ ಪದಾಧಿಕಾರಿಗಳು ಮುಖಂಡರು ಸೇರಿದಂತೆ ಹಲವಾರು ಜನ ಸಮಿತಿಯ ಸದಸ್ಯರಿದ್ದರು.

# ನಾನು ಮಹಮ್ಮದ್ ಮುಕ್ತಿಯರ್‌ಗೆ ಮೋಸ ಮಾಡಿಲ್ಲ : ರಾಜಭಕ್ಷಿ ಸ್ಪಷ್ಟನೆ




ಬಳ್ಳಾರಿ : ಮೊಹಮ್ಮದ್ ಮುಕ್ತಿಯಾರ್ ಎನ್ನುವವರು ಮೊನ್ನೆ ಸುದ್ದಿಗೋಷ್ಠಿಯನ್ನು ನಡೆಸಿ ನನ್ನ ಮೇಲೆ ಇಲ್ಲಸಲ್ಲದ ಆರೋಪವನ್ನು ಮಾಡಿದ್ದಾರೆ, ನಾನು ಮುಕ್ತಿಯರಿಗೆ ಯಾವುದೇ ಮೋಸ ಮಾಡಿಲ್ಲ ಕಾನೂನಾತ್ಮಕವಾಗಿ ನಿವೇಶನವನ್ನು ಮಾರಾಟ ಮಾಡಿ ನೋಂದಣಿ ಮಾಡಿಸಿಕೊಟ್ಟಿದ್ದೇನೆ ಎಂದು ರಾಜಭಕ್ಷಿ ತಮ್ಮ ಮೇಲಿನ ಆರೋಪಕ್ಕೆ ಸ್ಪಷ್ಟನೆ ನೀಡಿದರು. ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ನಾನು ಇದೇ ನಿವೇಶನವನ್ನು 2020ರಲ್ಲಿ ನಗರದ ವೆಂಕಟೇಶ್ವರ ನಗರದಲ್ಲಿರುವ ತಾವು ಖರೀದಿಸಿದ್ದ ಜಾಗಕ್ಕೆ ಸಂಬಂಧಿಸಿದಂತೆ ಲಕ್ಷ್ಮೀ ನಾರಾಯಣ ಎಂಬುವವರು ಹೈಕೋರ್ಟ್‌ನಲ್ಲಿ ದಾವೆ ಹೂಡಿದ್ದರು ಈ ಪ್ರಕರಣದಲ್ಲಿ ಜಿಲ್ಲಾ ನ್ಯಾಯಾಲಯದಲ್ಲಿ ಜಯಗಳಿಸಿದ ಬಳಿಕ, ಜಾಗಕ್ಕೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ಪರಿಶೀಲಿಸಿ ಪಕ್ಕಾ ದಾಖಲೆಗಳೊಂದಿಗೆ ಮೊಹಮ್ಮದ್ ಮುಕ್ತಿಯಾರ್ ಅವರಿಗೆ 54 ಲಕ್ಷ 80 ಸಾವಿರ ರೂಪಾಯಿಗೆ ಜಾಗವನ್ನು ಮಾರಾಟ ಮಾಡಲಾಗಿತ್ತು ಎಂದು ಹೇಳಿದರು.ನಂತರ ಮೊಹಮ್ಮದ್ ಮುಕ್ತಿಯಾರ್ ಅವರು ಇದೇ ಜಾಗದ ಆಧಾರದ ಮೇಲೆ ಬ್ಯಾಂಕ್‌ನಲ್ಲಿ ಸಾಲವನ್ನೂ ಪಡೆದಿದ್ದಾರೆ. ಅಲ್ಲದೆ, ಪ್ರಕಾಶ್ ಎಂಬುವವರಿಂದ 13 ಲಕ್ಷ ರೂಪಾಯಿ ಮುಂಗಡ ಹಣ ಪಡೆದು ಸೈಟ್ ಮಾರಾಟದ ವ್ಯವಹಾರವನ್ನೂ ನಡೆಸಿದ್ದಾರೆ ಎಂದು ರಾಜಭಕ್ಷಿ ಆರೋಪಿಸಿದರು.

ಆರ್ಥಿಕವಾಗಿ ನಷ್ಟ ಉಂಟಾದ ಹಿನ್ನೆಲೆಯಲ್ಲಿ ನಿವೇಶನ ಮರು ಮಾರಾಟ ಮಾಡುವ ಉದ್ದೇಶದಿಂದ ತಮ್ಮ ಬಳಿ ಬಂದ ಮೊಹಮ್ಮದ್ ಮುಕ್ತಿಯಾರ್ ಅವರು ಹೆಚ್ಚಿನ ಬೆಲೆಗೆ ಜಾಗವನ್ನು ಖರೀದಿಸುವಂತೆ ಬೇಡಿಕೆ ಇಟ್ಟಿದ್ದರು. ಆದರೆ ಅದಕ್ಕೆ ತಾವು ಒಪ್ಪದ ಕಾರಣ ತಮ್ಮ ವಿರುದ್ಧ ಇಲ್ಲಸಲ್ಲದ ಸುಳ್ಳು ಆರೋಪಗಳನ್ನು ಮಾಡಿ ಮಾನಹಾನಿಗೆ ಯತ್ನಿಸಿರುವ ಹಿನ್ನೆಲೆಯಲ್ಲಿ ಮೊಹಮ್ಮದ್ ಮುಕ್ತಿಯಾರ್ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಲಾಗುವುದು ಎಂದು ರಾಜಭಕ್ಷಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಶೇಕ್ಷವಲಿ, ಖಲೀಮ್, ಪ್ರಕಾಶ್, ಧನುಜಯ್, ಅಕ್ಬರ್, ವೆಂಕಟೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಇರಾನ್ ಮೇಲೆ ಅಮೆರಿಕ ಸೇನೆಯಿಂದ ಮತ್ತೆ ಭೀಕರ ವೈಮಾನಿಕ ದಾಳಿ



ವಾಷಿಂಗ್ಟನ್/ಟೆಹ್ರಾನ್: ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳು ಹಾಗೂ ಮಧ್ಯಪ್ರಾಚ್ಯದಲ್ಲಿ ನಿಯೋಜನೆಗೊಂಡಿರುವ ಅಮೆರಿಕ ಸೈನಿಕರ ಮೇಲೆ ದಾಳಿಗೆ ಯತ್ನಿಸಿದ್ದಕ್ಕೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ನೆಲೆಗಳ ಮೇಲೆ ಅಮೆರಿಕ(ಗಖಂ) ಸೇನೆ ದಾಳಿ ಆರಂಭಿಸಿದೆ. ಈ ಕುರಿತು 'ಎಕ್ಸ್' ಖಾತೆಯಲ್ಲಿ ಮಾಹಿತಿ ನೀಡಿರುವ ಅಮೆರಿಕ ಸೆಂಟ್ರಲ್ ಕಮಾಂಡ್ ಅಮೆರಿಕ ಕಾಲಮಾನ ಮಧ್ಯಾಹ್ನ 12 ಗಂಟೆಗೆ(ಭಾರತೀಯ ಕಾಲಮಾನ ರಾತ್ರಿ 9:30ಕ್ಕೆ) ಇರಾನ್‌ನಲ್ಲಿರುವ ಐಆರ್‌ಜಿಸಿ ಗುರಿಗಳ ಮೇಲೆ ಅಮೆರಿಕ ಪಡೆಗಳು ವೈಮಾನಿಕ ದಾಳಿ ಆರಂಭಿಸಿವೆ ಎಂದು ತಿಳಿಸಿದೆ. ಹಾರ್ಮುಜ್ ಜಲಸಂಧಿಯ ಪೂರ್ವ ಭಾಗದ ನಗರಗಳ ಮೇಲೆ ನಾಲ್ಕು ಕ್ಷಿಪಣಿಗಳು ಬಿದ್ದಿರುವುದಾಗಿ ಇರಾನ್‌ನ ಅಧಿಕೃತ ಸುದ್ದಿ ಸಂಸ್ಥೆ 'ಐಆರ್‌ಎನ್‌ಎ' ವರದಿ ಮಾಡಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.